# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 72 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 01–10–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 72 | RNI No: KARKAN/2023/88462 | Chitradurga | Date: 01-10-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ತಾಲ್ಲೂಕಿನಾದ್ಯಂತ ಸುರಿದ ಹಸ್ತ ಮಳೆ ಶೇಂಗಾ ಸೇರಿ ಎಲ್ಲಾ ಬೆಳೆಗಳ ಚೇತರಿಕೆ 2

ಶರಣಸಂಸ್ಕೃತಿ ಉತ್ಸವದ ಆಹ್ವಾನ ಪತ್ರಿಕೆ ಬಿಡುಗಡೆ 3

ಪೌಷ್ಠಿಕ ಆಹಾರ ವಿತರಣಾ ಕಾರ್ಯಕ್ರಮಕ್ಕೆ ಶಾಸಕ ಚಂದ್ರಪ್ಪ ಚಾಲನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಸಾವಿನಲ್ಲೂ ಒಂದಾದ ದಂಪತಿ



» ನಮ್ಮಜನ ಸಮಾಚಾರ

ಚಿತ್ರದುರ್ಗ: ತನ್ನ ಗಂಡ ಆಸ್ಪತ್ರೆಯಲ್ಲಿ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದ ಕೂಡಲೇ ಪತ್ನಿ ಸಹ ಬಿಟ್ಟಿರುವ ಘಟನೆ ಚಿತ್ರದುರ್ಗ ನಗರದಲ್ಲಿ ನಡೆದಿದೆ. ಜಗಕ್ಕೆ ಅನೇಕ ದಂಪತಿಗಳು ನೀನು ಇಲ್ಲದೇ ನಾನಿಲ್ಲ ಎಂಬ ಮಾತುಗಳನ್ನು ಮಡದಿ ಬಳಿ ಒಬ್ಬರಿಗೊಬ್ಬರ ಹೇಳಿಕೊಂಡಿರುತ್ತಾರೆ. ಆದರೆ ಅದು ಸಾಧ್ಯವಾಗುವುದು ಕೆಲವೇ ಕೇಲವು ಪ್ರಕರಣದಲ್ಲಿ ಮಾತ್ರವಾಗಿದ್ದು ಇಂತಹ ಮನಮಿಡಿಯುವ ಘಟನೆ ಕೋಟೆ ನಾಡು ಚಿತ್ರದುರ್ಗದಲ್ಲಿ ಜರುಗಿದೆ. ಚಿತ್ರದುರ್ಗ ನಗರದ ಸಂಗಮೇಶ್ವರ ಬಡಾವಣೆಯ ದಂಪತಿಗಳು ಸಾವಿನಲ್ಲೂ ಒಂದಾದಗಿ ಇಹಲೋಕ ತ್ಯಜಿಸಿದ್ದಾರೆ. ಆಸ್ಪತ್ರೆಗೆ ಕರೆದೊಯ್ದು ಪತಿ ಚಿಂತಾಜನಕ ಎಂದು ಸುದ್ದಿ ಕೇಳಿದ ಪತ್ನಿ ದ್ರಾಕ್ಷಾಯಿಣಮ್ಮ ಪತಿಯ ಕೈ ಹಿಡಿದುಕೊಂಡೇ ಕೊನೆಯುಸಿರೆಳೆದಿದ್ದಾಳೆ. ಪತ್ನಿ ದ್ರಾಕ್ಷಾಯಿಣಮ್ಮ ಮೃತಪಟ್ಟ ಬಳಿಕ ಓಂಕಾರಮೂರ್ತಿ ಸಾವು ಸಂಭವಿದೆ. ಪತಿ ಓಂಕಾರಮೂರ್ತಿಯನ್ನ ಪತ್ನಿ ದ್ರಾಕ್ಷಿಯಣಮ್ಮ ಚಿಕಿತ್ಸೆಗೆ ಆಸ್ಪತ್ರೆಗೆ ಕರೆದೊಯ್ದಿದ್ದಳು. ಓಂಕಾರಮೂರ್ತಿ(67) ದ್ರಾಕ್ಷಾಯಿಣಮ್ಮ (59) ಜೊತೆಗೆ ಜೀವ ಬಿಟ್ಟಿದ್ದಾರೆ. ಪತಿ ಇಲ್ಲದೆ ಒಂದು ಕ್ಷಣವೂ ಇರಲಾರೆ ಎಂದು ಪತ್ನಿ ದ್ರಾಕ್ಷಾಯಿಣಮ್ಮ ಅನೇಕ ಬಾರಿ ಹೇಳಿಕೊಂಡಿದ್ದಳರು. ಎಂದು ತಾಯಿ ಹೇಳಿದ್ದ ಮಾತು ನೆನೆದು ಇಬ್ಬರು ಪುತ್ರಿಯರ ಆಕ್ರಂದನ ಮುಗುಲು ಮುಟ್ಟಿದೆ.

### ಮಳೆ ವರದಿ: ಚಿತ್ರದುರ್ಗ ಜಿಲ್ಲೆಯಲ್ಲಿ 13.4 ಮಿ.ಮೀ ಮಳೆ



» ಚಿತ್ರದುರ್ಗ

ಭಾನುವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 13.4 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 17.1 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 17.7 ಹಿರಿಯೂರು ತಾಲ್ಲೂಕು 10 ಮಿ.ಮೀ, ಹೊಳಲ್ಕೆರೆ ತಾಲ್ಲೂಕು10.4ಮಿ.ಮೀ,ಹೊಸದುರ್ಗ ತಾಲ್ಲೂಕಿನಲ್ಲಿ 10.3 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 13.6 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 16.5 ಮಿ.ಮೀ, ನಾಯಕನಹಟ್ಟಿ 31.8 ಮಿ.ಮೀ, ಪರಶುರಾಂಪುರ 14.6 ಮಿ.ಮೀ, ತಳಕು 9.2 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 9.5 ಮಿ.ಮೀ, ಭರಮಸಾಗರ 22.5 ಮಿ.ಮೀ, ಹಿರೇಗುಂಟನೂರು 33 ಮಿ.ಮೀ, ತುರುವನೂರು 15.1 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 12.9 ಮಿ.ಮೀ, ಐಮಂಗಲ 9.4 ಮಿ.ಮೀ, ಧರ್ಮಪುರ 9 ಮಿ.ಮೀ, ಜವನಗೊಂಡನಹಳ್ಳಿ 9.6 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 11.3 ಮಿ.ಮೀ, ಬಿ.ದುರ್ಗ 9.1 ಮಿ.ಮೀ, ರಾಮಗಿರಿ 10 ಮಿ.ಮೀ, ತಾಳ್ಯ 11.1 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 9.3 ಮಿ.ಮೀ, ಮಾಡದಕೆರೆ 18.3 ಮಿ.ಮೀ, ಮತ್ತೋಡು 5.3 ಮಿ.ಮೀ, ಶ್ರೀರಾಂಪುರ 4.4 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 17.8 ಮಿ.ಮೀ ಹಾಗೂ ದೇವಸಮುದ್ರದಲ್ಲಿ 8.9 ಮಿ.ಮೀ ಮಳೆಯಾಗಿದೆ.

### ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಸರ್ಕಾರಿ ಯೋಜನೆಗಳ ಸೌಲಭ್ಯ ಫಲಾನುಭವಿಗಳಿಗೆ ಶೀಘ್ರ ತಲುಪಬೇಕು

» ಚಿತ್ರದುರ್ಗ

ಸರ್ಕಾರದ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಸೌಲಭ್ಯ ಶೀಘ್ರವಾಗಿ ತಲುಪಬೇಕು, ವಿವಿಧ ನಿಗಮಗಳಡಿಯಲ್ಲಿನ ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿಯ ಕೊರತೆಯಿದ್ದು, ನಿಗಮದವರು ಯೋಜನಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2022–23ನೇ ಸಾಲಿನಲ್ಲಿ ಭೋವಿ ಅಭಿವೃದ್ಧಿ ನಿಗಮದ ಸ್ವಯಂ ಉದ್ಯೋಗ ನೇರಸಾಲ, ಮೈಕ್ರೋ ಕ್ರೆಡಿಟ್, ಉದ್ದಮಶೀಲತಾ ಯೋಜನೆಗಳಿಗೆ ನಿಗಧಿ ಪಡಿಸಿದ ಗುರಿಗಳನ್ನು ತಲುಪದಿರುವ ಕುರಿತು, ಹಾಗೂ 2023–24ನೇ ಸಾಲಿನಲ್ಲಿ ಯೋಜನೆಗಳ ಗುರಿ ಸಾಧನೆ ಶೂನ್ಯ ಇರುವುದಕ್ಕೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಯೋಜನೆಗಳ ಫಲಾನುಭವಿಗಳಿಗೆ ಶೀಘ್ರವೇ ಸಹಾಯಧನ, ನೇರವಾಗಿ ಖಾತೆಗೆ ಜಮೆ ಮಾಡಲು ನಿಗಮದ ವ್ಯವಸ್ಥಾಪಕರು ಕ್ರಮ ಕೈಗೊಳ್ಳಬೇಕು. ನಿಗಮದ ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ಕೊರತೆಯಿದೆ. ಯೋಜನಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಬೇಕು. ನಗರಸಭೆ, ತಾಲ್ಲೂಕು ಪಂಚಾಯಿತಿ, ತಹಶೀಲ್ದಾರ್ ಕಚೇರಿ, ಗ್ರಾಮ ಪಂಚಾಯಿತಿ ಸೇರಿದಂತೆ ಎಲ್ಲಾ ಸ್ಥಳೀಯ ಸಂಸ್ಥೆ ಕಚೇರಿಗಳ ಮಾಹಿತಿ ಫಲಕಗಳಲ್ಲಿ ಯೋಜನೆಗಳ ವಿವರಗಳನ್ನು ಪ್ರದರ್ಶಿಸಬೇಕು. ತಾಂತ್ರಿಕ ತೊಂದರೆಗಳನ್ನು ಶೀಘ್ರವೇ ಪರಿಹರಿಸುವಂತೆ ನಿಗಮದ ನಿರ್ದೇಶಕರಿಗೆ ಪತ್ರ ಕಳುಹಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

2022–23ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ನೇರಸಾಲ ಯೋಜನೆಯಡಿ 117 ಪೈಕಿ 50, ಉದ್ಯಮಶೀಲತಾ ಯೋಜನೆಯಡಿ 73 ಪೈಕಿ 16 ಫಲಾನುಭವಿಗಳ ಖಾತೆಗೆ ಸಹಾಯಧನ ವರ್ಗಾವಣೆ ಮಾಡಲಾಗಿದೆ. ಮೈಕ್ರೋ ಕ್ರೆಡಿಟ್ ಯೋಜನೆಯಡಿ 210 ಗುರಿ ನೀಡಲಾಗಿದ್ದು, ಯಾವುದೇ ಫಲಾನುಭವಿಗಳನ್ನು ಯೋಜನೆ ಲಾಭ ಪಡೆದಿಲ್ಲ. ಈ ಮೊದಲು ಯೋಜನೆಗಳ ಫಲಾನುಭವಿಗಳ ವಿವರವನ್ನು ಸೇವಾ ಸಿಂಧು ತಂತ್ರಾಂಶದಲ್ಲಿ ನೊಂದಣಿ ಮಾಡಲಾಗುತ್ತಿತ್ತು. ಸದ್ಯ ವಿಶ್ವಾಸ್ ಎಂಬ ಹೊಸ ತಂತ್ರಾಂಶಕ್ಕೆ ವಿವರಗಳನ್ನು ವರ್ಗಾಹಿಸಬೇಕಾಗಿರುವುದರಿಂದ 2023–24 ನೇ ಸಾಲಿನಲ್ಲಿ ಯಾವುದೇ ಫಲಾನುಭವಿಗಳಿಗೆ ಸಹಾಯಧನ ವರ್ಗಾವಣೆಯಾಗಿಲ್ಲ ಎಂದು ನಿಗದ ವ್ಯವಸ್ಥಾಪಕ ನಾಗರಾಜ ಮಾಹಿತಿ ನೀಡಿದರು.

**ಕಾಯ್ದೆಯ ದುರುಪಯೋಗ ಆಗಬಾರದು** : ಪರಿಶಿಷ್ಟರ ಮೇಲಿನ ದೌರ್ಜನ್ಯ ನಿಯಂತ್ರಣ ಕಾಯ್ದೆಯಡಿ ದಾಖಲಾಗುವ ಪ್ರಕರಣಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಬಾಧಿತರಿಗೆ ಶೀಘ್ರ ಪರಿಹಾರ ನೀಡಬೇಕು. ದಾಖಲಾಗಿರುವ ಪ್ರಕರಣಗಳಲ್ಲಿ ಆರೋಪಿತರು ಪ್ರಕರಣಗಳಿಂದ ಮುಕ್ತರಾಗುತ್ತಿದಾರೆ. ದಾಖಲಾದ ಪ್ರಕರಣಗಳಿಗೆ ಹೊಲಿಸಿದರೆ ಶಿಕ್ಷೆಗೆ ಗುರಿಯಾದವರ ಪ್ರಮಾಣ ಅತ್ಯಂತ ಕಡಿಮೆ ಇರುವುದು ಕಳವಳಕಾರಿಯಾಗಿದೆ. ಇದರಿಂದ ಕಾಯ್ದೆ ಉದ್ದೇಶ ಈಡೇರಿದಂತೆ ಆಗುವುದಿಲ್ಲ. ದೌರ್ಜನ್ಯ ನಿಯಂತ್ರಣ ಕಾಯ್ದೆಯ ದುರುಪಯೋಗ ಪಡಿಸಿಕೊಂಡು ಸುಳ್ಳು ಪ್ರಕರಣಗಳು ದಾಖಲಾಗಬಾರದು. ಈ ಕುರಿತು ಸತ್ಯಾಸತ್ಯತೆ ಪರಿಶೀಲಿಸಿ ಪೊಲೀಸರು ಪ್ರಕರಣಗಳನ್ನು ದಾಖಲಿಸಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

ಪುಟ ↘ 2



### ವಲಸೆ ಮಕ್ಕಳ ವಿವರ ಪತ್ತೆಗೆ ಸೂಚನೆ

ಜಿಲ್ಲೆಯಿಂದ ಇತರೆ ಜಿಲ್ಲೆ ಹಾಗೂ ಹೊರ ರಾಜ್ಯಗಳಿಗೆ ವಲಸೆ ಹೋದ ಮಕ್ಕಳ ವಿವರವನ್ನು ವಾರದಲ್ಲಿ ಶಿಕ್ಷಣ ಇಲಾಖೆಯಿಂದ ಪತ್ತೆ ಹಚ್ಚಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು. ವಲಸೆ ಹೋದ 27 ಮಕ್ಕಳ ಪೈಕಿ ವಿವರ ಪತ್ತೆಯಾಗದ 18 ಮಕ್ಕಳನ್ನು ಪೊಲೀಸ್, ಗ್ರಾಮಲೆಕ್ಕಾಧಿಕಾರಿ ಹಾಗೂ ಪಿಡಿಓಗಳ ಸಹಾಯದಿಂದ ಪತ್ತೆ ಹಚ್ಚಿ ಮುಖ್ಯವಾಹಿನಿಗೆ ತರುವ ಕೆಲಸ ಮಾಡಬೇಕು. ಪತ್ರ ವ್ಯವಹಾರ ನಡೆಸಿ ಸುಮ್ಮನೆ ಕುಳಿತುಕೊಳ್ಳದೇ, ಬಿಇಓ ಹಾಗೂ ತಾಲ್ಲೂಕು ಪಂಚಾಯಿತಿ ಇಓ ಗಳು ಸ್ಥಳ ಪರಿಶೀಲನೆ ನಡೆಸಿ ವಿವರ ಸಂಗ್ರಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಾಕೀತು ಮಾಡಿದರು. ಚಳ್ಳಕೆರೆ ತಾಲ್ಲೂಕಿನಲ್ಲಿ ಒಟ್ಟು 74 ಮಕ್ಕಳು ಶಾಲೆಯಿಂದ ಹೊರಗುಳಿದಿದ್ದರು. ಈ ಪೈಕಿ 69 ಮಕ್ಕಳನ್ನು ಮುಖ್ಯವಾಹಿನಿಗೆ ತರಲಾಗಿದೆ. ಬೇರೆ ಜಿಲ್ಲೆಯಿಂದ ಜಿಲ್ಲೆಗೆ ವಲಸೆ ಬಂದು, ಇಲ್ಲಿ ನೆಲೆಸಿರುವವರ ಮಕ್ಕಳ ವಿವರಗಳನ್ನು ಪಡೆದು, ಆಯಾ ಉಪನಿರ್ದೇಶಕರಿಗೆ ಮಾಹಿತಿ ನೀಡಲಾಗಿದೆ ಎಂದು ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಸಭೆಯಲ್ಲಿ ಮಾಹಿತಿ ನೀಡಿದರು.

# ಬಸ್ ಪಲ್ಟಿ, ಶಾಲಾ ಮಕ್ಕಳಿಗೆ ಗಾಯ

» ನಮ್ಮಜನ ಸಮಾಚಾರ

ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಓಬಳಾಪುರ ತಾಂಡದಲ್ಲಿ ಸೋಮವಾರ ಬೆಳಿಗ್ಗೆ ಬಸ್ ಪಲ್ಟಿಯಾಗಿರುವ ಘಟನೆ ಸಂಭವಿಸಿದೆ. ಚಾಲಕನ ನಿಯಂತ್ರಣ ತಪ್ಪಿದ KSRTC ಬಸ್ ಪಲ್ಟಿಯಾಗಿ ಶಾಲಾ, ಕಾಲೇಜು ವಿದ್ಯಾರ್ಥಿಗಳು ಸೇರಿ ಸುಮಾರು 50 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಬಸ್ಸಿನಲ್ಲಿ ಸುಮಾರು ಐವತ್ತಕ್ಕೂ ಹೆಚ್ಚು ಮಂದಿ ಪ್ರಯಾಣಿಕರಿದ್ದರು ಎಂದು ಹೇಳಲಾಗಿದ್ದು ಓಬಳಾಪುರ ತಾಂಡ ವಾಲಿ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ, ಕೂಡಲೇ ಅಲ್ಲಿದ್ದ ಸ್ಥಳೀಯರು ಬಸ್ಸಿನಲ್ಲಿದ್ದ ವಿದ್ಯಾರ್ಥಿಗಳನ್ನು ಹಾಗೂ ಇತರ ಪ್ರಯಾಣಿಕರನ್ನು ರಕ್ಷಣೆ ಮಾಡಿದ್ದಾರೆ, ಘಟನೆಯಿಂದ ಹಲವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗಾಯಾಳುಗಳನ್ನು ಹಿರಿಯೂರು ತಾಲ್ಲೂಕು ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು ಘಟನಾ ಸ್ಥಳಕ್ಕೆ ಹಿರಿಯೂರು ಗ್ರಾಮಾಂತರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.



## ಪ್ರಮುಖ ಸುದ್ದಿ

### ಸಫಾಯಿ ಕರ್ಮಚಾರಿಗಳಿಗೆ ಆರೋಗ್ಯ ತಪಾಸಣೆ, ಘನತೆ ಪ್ರಮಾಣ ಪತ್ರ ವಿತರಣೆ

# ಆರೋಗ್ಯ ಕಾಪಾಡುವಲ್ಲಿ ಸಫಾಯಿ ಕರ್ಮಚಾರಿಗಳ ಕೆಲಸ ಪ್ರಮುಖ

0ಚಿತ್ರದುರ್ಗ

ಸಫಾಯಿ ಕರ್ಮಚಾರಿಗಳ ಕಾಯಕ ಪವಿತ್ರವಾದ ಕಾರ್ಯ. ಸಮುದಾಯದ ಆರೋಗ್ಯ ಕಾಪಾಡಲು ಶ್ರಮವಹಿಸುತ್ತಾರೆ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕು ಚಿಕ್ಕಗೊಂಡನಹಳ್ಳಿ ಮತ್ತು ಗುಡ್ಡದ ರಂಗವ್ವನಹಳ್ಳಿ ಗ್ರಾಮ ಪಂಚಾಯಿತಿಗಳಲ್ಲಿ ಸೋಮವಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಆರೋಗ್ಯ ಇಲಾಖೆ ಮತ್ತು ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ಗ್ರಾಮ ಪಂಚಾಯಿತಿ ಟಾಸ್ಕ್ ಫೋರ್ಸ್ ಸಮಿತಿ ಸದಸ್ಯರಿಗೆ ಮತ್ತು ಸಮನ್ವಯ ಇಲಾಖೆಯ ಕ್ಷೇತ್ರ ಮಟ್ಟದ ಅಧಿಕಾರಿಗಳಿಗೆ ಗ್ರಾಮ ಆರೋಗ್ಯ ಯೋಜನೆ ತರಬೇತಿ ಕಾರ್ಯಾಗಾರ, ಸ್ವಚ್ಛತಾ ಹೀ ಸೇವಾ ಪಾಕ್ಷಿಕ, ವಿಶ್ವ ಹೃದಯ ದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗ್ರಾಮ ಮಟ್ಟದಲ್ಲಿ ಸಫಾಯಿ ಕರ್ಮಚಾರಿಗಳ ಕೆಲಸ ಪ್ರಮುಖವಾದದ್ದು. ಸಮುದಾಯದ ಆರೋಗ್ಯ ಕಾಪಾಡಲು ಶ್ರಮವಹಿಸುತ್ತಾರೆ. ಸ್ವಚ್ಛತಾ ಹೀ ಸೇವಾ ಪಾಕ್ಷಿಕದ ಅಂಗವಾಗಿ ಸರ್ಕಾರದ ಮಾರ್ಗಸೂಚಿಯಂತೆ ಆರೋಗ್ಯ ತಪಾಸಣೆ ನಡೆಸಿ “ಘನತೆ ಪ್ರಮಾಣ ಪತ್ರ” ವಿತರಿಸಲಾಗುತ್ತದೆ. ಜೊತೆಯಲ್ಲಿಯೇ ಗ್ರಾಮ ಪಂಚಾಯತಿ ಟಾಸ್ಕ್ ಫೋರ್ಸ್ ಸದಸ್ಯರು ಗ್ರಾಮ ಆರೋಗ್ಯ ಯೋಜನೆ ಅನುಷ್ಠಾನದಲ್ಲಿ ಸಕ್ರಿಯವಾಗಿ ಭಾಗವಹಿಸಿ ಎಂದು ಹೇಳಿದರು.



ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾಹಿತಿ ಶಿಕ್ಷಣ ನೀಡಿ, ಗ್ರಾಮ ಪಂಚಾಯತಿ ಎಲ್ಲಾ ಗ್ರಾಮಗಳ ವಾರ್ಡ್‌ವಾರು ಸಾರ್ವಜನಿಕ ಆರೋಗ್ಯ ಸಮಸ್ಯೆಗಳನ್ನು, ಬಾಲ್ಯ ವಿವಾಹದಂತಹ ಸಾಮಾಜಿಕ ಪಿಡುಗುಗಳನ್ನು ಎದುರಿಸಲು ಆರೋಗ್ಯ ಇಲಾಖೆ, ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಸದಾ ಗ್ರಾಮ ಪಂಚಾಯತಿ ಟಾಸ್ಕ್ ಫೋರ್ಸ್ ಜೊತೆಯಲ್ಲಿ ಕಾರ್ಯ ನಿರ್ವಹಿಸುತ್ತದೆ. ಯೋಜನೆ ತಯಾರಿಸಿ ಸಾರ್ವಜನಿಕ ಆರೋಗ್ಯ ಸಮಸ್ಯೆಗಳನ್ನು ನಿಮ್ಮ ಹಂತದಲ್ಲೇ ಬಗೆಹರಿಸಿಕೊಳ್ಳಲು ಕಾರ್ಯೋನ್ಮುಖರಾಗಿ ಎಂದು ಹೇಳಿದರು. ಸಫಾಯಿ ಕರ್ಮಚಾರಿಗಳ ಕಾಯಕಕ್ಕೆ ಯಾವುದೇ ಘನತೆಯ ಕುಂದು ಬರಬಾರದು. ಒಂದು ದಿನ ರಜೆ ಹಾಕಿದರೆ ಸಮುದಾಯದ ಸ್ವಾಸ್ಥ್ಯವೇ ಹಾಳಾಗುತ್ತದೆ. ಸಫಾಯಿ ಕರ್ಮಚಾರಿಗಳ ನೀರುಗಂಟೆಯವರ ಆರೋಗ್ಯಕ್ಕೆ ಮೊದಲನೇಯ ಆದ್ಯತೆ ನೀಡಿ ಅವರನ್ನು ಗೌರವ ಪೂರ್ವಕವಾಗಿ ನಡೆಸಿಕೊಳ್ಳಬೇಕು ಎಂದರು. ಕಾರ್ಯಕ್ರಮದಲ್ಲಿ ಚಿಕ್ಕಗೊಂಡನಹಳ್ಳಿ ಗ್ರಾಮ ಪಂಚಾಯತಿಯ 11 ಜನ ಸಫಾಯಿ ಕರ್ಮಚಾರಿಗಳ 10 ಜನ ಸಿಬ್ಬಂದಿಗಳಿಗೆ ಮತ್ತು ಜಿ.ಆರ್. ಹಳ್ಳಿಯ 6 ಜನ ಸಫಾಯಿ ಕರ್ಮಚಾರಿಗಳಿಗೆ ಮತ್ತು 8 ಜನ ಇತರೆ ಸಿಬ್ಬಂದಿಗಳಿಗೆ ಮಧುಮೇಹ, ರಕ್ತದೊತ್ತಡ, ರಕ್ತಹೀನತೆ, ಇತರೆ ಆರೋಗ್ಯ ತಪಾಸಣೆ, ಪ್ರಯೋಗಶಾಲಾ ಪರೀಕ್ಷೆ ನಡೆಸಲಾಯಿತು.

ಇದೇ ಸಂದರ್ಭದಲ್ಲಿ ಸಫಾಯಿ ಕರ್ಮಚಾರಿಗಳಿಗೆ ಘನತೆ ಪ್ರಮಾಣ ಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಚಿಕ್ಕಗೊಂಡನಹಳ್ಳಿ ಗ್ರಾಮ ಪಂಚಾಯತಿ ಉಪಾಧ್ಯಕ್ಷ ಗಂಗಾಧಾರಯ್ಯ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಚೈತ್ರಾರೆಡ್ಡಿ, ಸಿ.ಜೆ.ಹಳ್ಳಿ ಆಡಳಿತ ವೈದ್ಯಾಧಿಕಾರಿ ಡಾ.ಸಚಿನ್ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶಂಕರ್ ನಾಯ್ಕ್, ಪ್ರವೀಣ್ ಕುಮಾರ್, ಸಮುದಾಯ ಆರೋಗ್ಯಾಧಿಕಾರಿಗಳಾದ ಪ್ರವೀಣ್ ಕುಮಾರ್, ಶಭಾನ, ಜಿ.ಆರ್.ಹಳ್ಳಿ ಪಿ.ಡಿ.ಓ ಆನಂದ್, ಗ್ರಾಮಪಂಚಾಯ್ತಿ ಸದಸ್ಯರು, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಮಂಜುಳಾ, ಸಫಾಯಿ ಕರ್ಮಚಾರಿಗಳು, ನೀರುಗಂಟೆಯವರು, ಇದ್ದರು.

## ಫಾಸ್ಟ್ ನ್ಯೂಸ್

### ಮಹಿಳೆ ಕಾಣೆ: ಪತ್ತೆಗೆ ಮನವಿ

» ಚಿತ್ರದುರ್ಗ



ಚಿತ್ರದುರ್ಗ ನಗರದ ವಾಸಿ ಮಂಜುಳ ಗಂಡ ಲೇಟ್ ಅಶೋಕ್ ಗೋಸಾಯಿ (ಸು.40ವರ್ಷ) ಎಂಬ ಮಹಿಳೆ ಇದೇ ಸೆ.27ರಂದು ಕಾಣೆಯಾದ ಪ್ರಕರಣ ಚಿತ್ರದುರ್ಗ ಬಡಾವಣೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಮಹಿಳೆಯ ಚಹರೆ ಇಂತಿದೆ. ಸುಮಾರು 5.6 ಅಡಿ ಎತ್ತರ, ಕೋಲುಮುಖ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಬಲಗೈ ಒಳಭಾಗದಲ್ಲಿ ಶಿವಾಜಿ, ಎಡಗೈ ಒಳಭಾಗದಲ್ಲಿ ಸುರೇಶ ಎಂಬ ಹಚ್ಚೆ ಗುರುತುಗಳು ಇರುತ್ತವೆ. ತಲೆಕೂದಲಿಗೆ ರೆಡ್ ಗೋಲ್ಡ್ ಕಲರ್ ಹಾಕಿದ್ದು, ಮರಾಠಿ, ಕನ್ನಡ, ತೆಲುಗು, ಹಿಂದಿ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಸಿಮೆಂಟ್ ಕಲರ್ ಸೀರೆ, ಕಪ್ಪು ಬಣ್ಣದ ಬ್ಲೌಸ್ ಧರಿಸಿರುತ್ತಾರೆ. ಕಾಣೆಯಾದ ಮಹಿಳೆಯ ಕುರಿತು ಮಾಹಿತಿ ಕಂಡುಬಂದಲ್ಲಿ ಬಡಾವಣೆ ಪೊಲೀಸ್ ಠಾಣೆಯ ಉಪನಿರೀಕ್ಷಕರ ದೂರವಾಣಿ ಸಂಖ್ಯೆ 9480803164, ವೃತ್ತನಿರೀಕ್ಷಕರ ದೂರವಾಣಿ ಸಂಖ್ಯೆ 08194–222933, 9480803130, ಚಿತ್ರದುರ್ಗ ಉಪವಿಭಾಗ ಉಪಾಧೀಕ್ಷಕರ ದೂರವಾಣಿ ಸಂಖ್ಯೆ 08194–222430, 9480803120 ಹಾಗೂ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ 08194–222782 ಗೆ ಸಂಪರ್ಕಿಸಬಹುದು ಎಂದು ಬಡಾವಣೆ ಪೊಲೀಸ್ ಠಾಣೆ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೊಲಿಗೆ, ವಿಡಿಯೋಗ್ರಫಿ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿಯ ಯುವ ಜನರಿಗಾಗಿ, ಯುವ ಜನರನ್ನು ಸ್ವಾವಲಂಬಿಯಾಗಲು ಉತ್ತೇಜಿಸುವ ದೃಷ್ಟಿಯಿಂದ ಹೊಲಿಗೆ ತರಬೇತಿ ಮತ್ತು ವಿಡಿಯೋಗ್ರಾಫಿ ತರಬೇತಿ ಶಿಬಿರ ಹಮ್ಮಿಕೊಳ್ಳಲಾಗಿದೆ. ಈ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದೆ. ಹೊಲಿಗೆ ತರಬೇತಿ ಶಿಬಿರ 2024ರ ನವೆಂಬರ್ 7 ರಿಂದ 26 ರವರೆಗೆ 20 ದಿನಗಳು ಹಾಗೂ ವಿಡಿಯೋಗ್ರಾಫಿ ತರಬೇತಿ ಶಿಬಿರ 2024ರ ನವೆಂಬರ್ 15 ರಿಂದ 26ರ ವರೆಗೆ 12 ದಿನಗಳ ಕಾಲ ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಹೊಲಿಗೆ ತರಬೇತಿಗೆ ಎಸ್.ಎಸ್.ಎಲ್.ಸಿ ಪಾಸ್ ಅಥವಾ ಫೇಲ್ ಮತ್ತು ವಿಡಿಯೋಗ್ರಾಫಿ ತರಬೇತಿಗೆ ಪಿಯುಸಿ ಪಾಸ್ ಅಥವಾ ಫೇಲ್ ಆದ ಪರಿಶಿಷ್ಟ ಜಾತಿಯ 18–40 ವರ್ಷ ವಯೋಮಿತಿ ಹೊಂದಿರುವ ಯುವ ಜನರು ಅರ್ಜಿ ಸಲ್ಲಿಸಬಹುದು. ಅರ್ಜಿಗಳನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಚಿತ್ರದುರ್ಗ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆದು ಈ ಕಚೇರಿಗೆ ಸಲ್ಲಿಸಲು ತಿಳಿಸಿದೆ. ತರಬೇತಿ ಶಿಬಿರಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಊಟೋಪಹಾರ, ಪ್ರಮಾಣ ಪತ್ರ ಹಾಗೂ ಈ ಶಿಬಿರದಲ್ಲಿ ಭಾಗವಹಿಸುವ ಯುವತಿಯರಿಗೆ ಸಾಮಾನ್ಯ ವಸತಿ ವ್ಯವಸ್ಥೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 155265, 9731251411 ಹಾಗೂ ಕಚೇರಿಯ ದೂರವಾಣಿ ಸಂಖ್ಯೆ 08194–235635ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಸುಚೇತಾ ಎಂ ನೆಲವಗಿ ತಿಳಿಸಿದ್ದಾರೆ.

### ತೋಟಗಾರಿಕೆ ಇಲಾಖೆ: ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ತೋಟಗಾರಿಕೆ ಇಲಾಖೆಯಡಿ ಚಿತ್ರದುರ್ಗ ತಾಲ್ಲೂಕಿನ ರೈತರಿಗೆ 2024–25ನೇ ಸಾಲಿಗೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಯೋಜನೆಗಳಲ್ಲಿ ಸಹಾಯಧನ ಪಡೆಯಲು ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅ.15 ಕೊನೆಯ ದಿನವಾಗಿದೆ. ತೋಟಗಾರಿಕೆ ಇಲಾಖೆಯಡಿ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಮಿಷನ್ (ರಾಷ್ಟ್ರೀಯ ತೋಟಗಾರಿಕೆ ಮಿಷನ್), ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ (ಹನಿ ನೀರಾವರಿ ಯೋಜನೆ), ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ, ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಗಳಿಗೆ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದು. ಈ ಮೇಲ್ಕಂಡ ಯೋಜನೆಗಳಿಗೆ ಆಯಾ ಯೋಜನೆಗಳಲ್ಲಿ ನಿಗಧಿಪಡಿಸಿದ ಮಾರ್ಗಸೂಚಿಯಂತೆ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದು. ಎಲ್ಲಾ ಯೋಜನೆಗಳಿಗೆ ಈ ಹಿಂದೆ ಇಲಾಖೆಯಿಂದ ಸಹಾಯಧನ ಪಡೆಯದೇ ಇರುವ ಫಲಾನುಭವಿಗಳಿಗೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅತೀ ಸಣ್ಣ ರೈತರಿಗೆ, ಮಹಿಳೆಯರಿಗೆ, ಅಂಗವಿಕಲರಿಗೆ ಆದ್ಯತೆ ನೀಡಲಾಗುವುದು. ಅರ್ಜಿ ನಮೂನೆ, ಯೋಜನೆಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ತಾಲ್ಲೂಕು ತೋಟಗಾರಿಕೆ ಇಲಾಖೆಯನ್ನು ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

---

ತಾಲ್ಲೂಕಿನಾದ್ಯಂತ ಸುರಿದ ಹಸ್ತ ಮಳೆ ಶೇಂಗಾ ಸೇರಿದಂತೆ ಎಲ್ಲಾ ಬೆಳೆಗಳ ಚೇತರಿಕೆ


# ಸರ್ಕಾರಿ ಶಾಲೆ ಆವರಣದಲ್ಲಿ ನಿಂತ ಮಳೆ ನೀರು

» ಚಳ್ಳಕೆರೆ

ಕಳೆದ ಸುಮಾರು ಒಂದು ತಿಂಗಳಿನಿಂದ ಬಿಡುವು ಕೊಟ್ಟಿದ್ದ ಮಳೆರಾಯ ಮತ್ತೊಮ್ಮೆ ತಾಲ್ಲೂಕಿನಾದ್ಯಂತ ಬಿರುಸಾಗಿ ಬರದೇ ಇದ್ದರೂ ಕೆಲವೆಡೆ ಸಮೃದ್ದ ಮಳೆಯಾಗಿದೆ. ಪ್ರಾರಂಭದಲ್ಲಿ ಹಸ್ತ ಮಳೆ ಜನರಿಗೆ ನೆಮ್ಮದಿಯನ್ನುಂಟು ಮಾಡುವ ನಿಟ್ಟಿನಲ್ಲಿ ವಿವಿಧ ಭಾಗಗಳಲ್ಲಿ ಸಮೃದ್ಧಿಯಾಗಿ ಸುರಿದಿದ್ದು ಗ್ರಾಮದ ಸರ್ಕಾರಿ ಶಾಲೆಗಳು ಸಹ ಮಳೆನೀರಿನಿಂದ ಆವೃತ್ತವಾಗಿವೆ.

ತಾಲ್ಲೂಕಿನ ಕಸಬಾ ಹೋಬಳಿಯ ಗೋಪನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಡವಿಚಿಕ್ಕೇನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಒಳ ಹಾಗೂ ಹೊರ ಭಾಗದಲ್ಲಿ ಮಳೆ ನೀರಿನಿಂದ ತುಂಬಿದ್ದು, ಸೋಮವಾರ ಬೆಳಗ್ಗೆ ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳಿಗೆ ಶಾಲೆ ಒಳಗೆ ಪ್ರವೇಶಿಸದಂತೆ ಮಳೆಯ ನೀರು ನಿಂತಿದ್ದು ನೋಡಿ ದಂಗಾಗಿದ್ದಾರೆ. ಗ್ರಾಮದ ಮುಖಂಡ ಶ್ರೀನಿವಾಸ್ ಈ ಬಗ್ಗೆ ಮಾಹಿತಿ ನೀಡಿ, ಕಳೆದ ಹಲವಾರು ವರ್ಷಗಳಿಂದ ಶಾಲೆಯ ದುರಸ್ಥಿ ಹಾಗೂ ಮಳೆ ನೀರು ಸರಾಗವಾಗಿ ಹರಿಯಲು ವ್ಯವಸ್ಥೆ ಮಾಡಿಕೊಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಲಾಗಿತ್ತು.





ಶಾಲೆಯ ಹಲವಾರು ಕೊಠಡಿಗಳು ಮಳೆ ಬಂದರೆ ಸೋರುತ್ತವೆ, ಕೊಠಡಿಗಳ ಗೋಡೆಗಳು ಬಿರುಕು ಬಿಟ್ಟಿವೆ, ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ. ಸೋಮವಾರ ಬೆಳಗಿನ ಜಾವ ಬಿದ್ದ ಮಳೆ ನೀರು ಶಾಲೆಯ ಆವರಣದಲ್ಲೇ ನಿಂತಿದ್ದು ವಿದ್ಯಾರ್ಥಿಗಳಿಗೆ ಪಾಠ, ಪ್ರವಚನಕ್ಕೆ ತೊಂದರೆಯಾಗುವ ದೃಷ್ಠಿಯಿಂದ ನಿಂತಿದ್ದ ನೀರು ಹರಿಯಲು ವ್ಯವಸ್ಥೆ ಮಾಡಲಾಯಿತು. ಆದರೂ ಶಾಲೆಯ ಮುಂಭಾಗದಲ್ಲಿ ಕೆಸರಿದ್ದು, ಇದು ಮಕ್ಕಳಿಗೆ ಓಡಾಡಲು ತೊಂದರೆಯಾಗುತ್ತಿದೆ. ಈ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ ಅಗತ್ಯ ಕ್ರಮ ವಹಿಸುವಂತೆ ಮನವಿ ಮಾಡಿದ್ದಾರೆ.

ಪ್ರಸ್ತುತ ಶಾಲೆಯ ಅವ್ಯವಸ್ಥೆಯ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಗ್ರಾಮಸ್ಥರು ಈಗಾಗಲೇ ತುರ್ತು ರಿಪೇರಿ ಕಾರ್ಯ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ. ಗ್ರಾಮಸ್ಥರ ಮನವಿ ನಂತರವೂ ಇದುವರೆಗೂ ಯಾವುದೇ ಅಧಿಕಾರಿ ಶಾಲೆಗೆ ಭೇಟಿ ನೀಡಿಲ್ಲವೆಂಬುವುದು ಗ್ರಾಮಸ್ಥರ ಆರೋಪವಾಗಿದೆ. ಪ್ರಸ್ತುತ ಶಾಲೆಯ ಸ್ಥಿತಿಯನ್ನು ಸುಧಾರಿಸುವ ಕುರಿತು ಕ್ರಮಕೈಗೊಳ್ಳಯವ ಭರವಸೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ನೀಡಿದ್ದಾರೆ.

ನಗರದ ಬಳ್ಳಾರಿ ರಸ್ತೆಯ ಎರಡನೇ ಕ್ರಾಸ್‌ನ ತಿಪ್ಪೇರುದ್ರಸ್ವಾಮಿ ಕಾಂಡಿಮೆಂಟ್ಸ್ ಮುಂಭಾಗದಲ್ಲಿ ಇತ್ತೀಚೆಗೆ ಇಟ್ಟಿಗೆ ಸ್ಲಾಬ್‌ನ ರಸ್ತೆಯನ್ನು ನಿರ್ಮಿಸಿದ್ದು, ಮಳೆ ನೀರು ಸರಾಗವಾಗಿ ಹರಿಯಲು ವ್ಯವಸ್ತೆ ಮಾಡದ ಕಾರಣ ನೀರು ರಸ್ತೆಯ ಮೇಲೆ ನಿಂತು ಸಾರ್ವಜನಿಕ ಹಾಗೂ ವಾಹನ ಓಡಾಟಕ್ಕೆ ತೊಂದರೆಯಾಗಿದೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಬೇಕೆಂದು ತಿಪ್ಪೇರುದ್ರಪ್ಪ ಮನವಿ ಮಾಡಿದ್ದಾರೆ.

---

# ಪೋಷಣ್ ಮಾಸಾಚರಣೆ ಕಾರ್ಯಕ್ರಮಕ್ಕೆ ತಾಯಂದಿರ ಸಹಕಾರ: ಸುಮಿತ್ರಮ್ಮ

» ಚಳ್ಳಕೆರೆ

ಶಿಶು ಅಭಿವೃದ್ಧಿ ಹಾಗೂ ಮಕ್ಕಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ತಾಲ್ಲೂಕಿನಾದ್ಯಂತ ಅಪೋಷ್ಠಿಕತೆಯನ್ನು ಹೋಗಲಾಡಿಸಲು ಪೋಷಣ್ ಮಾಸಾಚರಣೆ ಮತ್ತು ಅನ್ನಪ್ರಾಶಾಸನ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದ್ದು, ತಾಯಂದಿರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ ಎಂದು ಅಂಗನವಾಡಿ ಮೇಲ್ವಿಚಾರಕಿ ಟಿ.ಸುಮಿತ್ರಮ್ಮ ತಿಳಿಸಿದರು.

ಅವರು, ಸೋಮವಾರ ನಗರಂಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಟ್ಟೆಪ್ಪನಹಳ್ಳಿ ಗ್ರಾಮದ ಸಿ.ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕಳೆದ ಸುಮಾರು ಒಂದು ತಿಂಗಳಿನಿಂದ ಪೋಷಣ್ ಅಭಿಯಾನ ಕಾರ್ಯಕ್ರಮವನ್ನು ಕ್ಷೇತ್ರದ ಎಲ್ಲಾ ಗ್ರಾಮ ಪಂಚಾಯಿತಿ ಕೇಂದ್ರ ಹಾಗೂ ಗ್ರಾಮಗಳ ವ್ಯಾಪ್ತಿಯಲ್ಲಿ ಹಮ್ಮಿಕೊಳ್ಳುತ್ತಿದ್ದು, ವಿಶೇಷವಾಗಿ ತಾಯಂದಿರು ಪೋಷಣ್ ಅಭಿಯಾನಕ್ಕೆ ಸಹಕಾರ ನೀಡಿದ್ದಾರೆಂದರು.



ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆ ಎಚ್.ದುರುಗಮ್ಮ, ಸಹಾಯಕಿ ಲಕ್ಷ್ಮಿದೇವಿ, ಎಸ್.ಗಗನ, ಬಿ.ಸುವರ್ಣಮ್ಮ, ಎ.ಅಶ್ವಿನಿ, ಎನ್.ಸವಿತಾ, ವಿ.ಶಶಿಕಲಾ, ಎ.ಮೀನಾಕ್ಷಮ್ಮ, ಸಿ.ನಾಗವೇಣಿ, ದ್ರಾಕ್ಷಾಯಣಮ್ಮ, ಚಂದನ, ನೂರ್‌ಜಹಾನ್, ಟಿ.ರಾಧಮ್ಮ, ಸಂಧ್ಯಾ, ತಾಯಂದಿರಾದ ದ್ಯಾಮಕ್ಕ, ಪವಿತ್ರ, ರತ್ನಮ್ಮ, ವಿಮಲಾಕ್ಷಿ ಮುಂತಾದವರು ಪಾಲ್ಗೊಂಡಿದ್ದರು.

### ಸ್ವಚ್ಛತಾ ಹೀ ಸೇವಾ ಜಾಗೃತಿ ಜಾಥ



» ಚಳ್ಳಕೆರೆ

ನಗರದ ವಾಸವಿ ಪ್ರಥಮ ದರ್ಜೆಕಾಲೇಜು ವತಿಯಿಂದ ಸ್ವಚ್ಛತಾ ಹೀ ಸೇವೆ ಸೇವಾ ಯೋಜನೆಯಡಿ ಸ್ವಚ್ಛತಾ ಜಾಗೃತಿ ಜಾಥವನ್ನು ಸ್ವಚ್ಛತೆಯ ಮೂಲಕ ಕಾಲೇಜು ಪ್ರಾಂಶುಪಾಲ ಜೆ.ಶ್ರೀರಾಮುಲು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ದಾವಣಗೆರೆ ವಿಶ್ವವಿದ್ಯಾಲಯ ಸೂಚನೆ ಮೇರೆಗೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾ ಘಟಕದ ಸಹಯೋಗದಲ್ಲಿ ಈ ಜಾಥವನ್ನು ಹಮ್ಮಿಕೊಂಡಿದೆ. ಕಾಲೇಜಿನ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ನಗರದ ಪ್ರಮುಖ ರಸ್ತೆಯಲ್ಲಿ ಜಾಥದ ಮೂಲಕ ಚಲಿಸಿ ಸಾರ್ವಜನಿಕರಿಗೆ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸಿದರು. ನಂತರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಸ್ವಚ್ಛತಾ ಕಾರ್ಯವನ್ನು ಕೈಗೊಂಡರು.

ಪ್ರಾಸ್ತಾವಿಕವಾಗಿ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಪ್ರಭಾಕರ, ರಾಷ್ಟ್ರೀಯ ಸೇವಾ ಯೋಜನಾ ಘಟಕ ಸ್ವಚ್ಛತೆಯೂ ಸೇರಿದಂತೆ ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತದೆ. ಪ್ರತಿವರ್ಷವೂ ಎನ್‌ಎಸ್‌ಎಸ್ ಶಿಬಿರಗಳ ಮೂಲಕ ಗ್ರಾಮೀಣ ಭಾಗಗಳಲ್ಲಿ ಸೇವಾ ಚಟುವಟಿಕೆಯನ್ನು ನಡೆಸುತ್ತಾ ಬಂದಿದೆ ಎಂದರು.

ಕಾರ್ಯಕ್ರಮದಲ್ಲಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಶಿವಾರೆಡ್ಡಿ, ಉಪನ್ಯಾಸಕರಾದ ಕೆ.ವಿ.ಮಂಜುನಾಥ, ಲಕ್ಷ್ಮಿಕಾಂತ್, ಯರ್ರಿಸ್ವಾಮಿ, ಕಾವ್ಯ, ಅಶ್ವಿನಿ ಮುಂತಾದವರು ಉಪಸ್ಥಿತರಿದ್ದರು.

---

# ನರಹರಿ ಸದ್ಗುರುಪೀಠದ ಸಂಸ್ಥಾಪಕ ಪ್ರೊ.ಯಾದಾಟಿ ನರಹರಿಗೆ ವಿಶ್ವೇಶ್ವರಯ್ಯ ರಾಜ್ಯಮಟ್ಟದ ಪ್ರಶಸ್ತಿ ಪ್ರಧಾನ

» ಚಳ್ಳಕೆರೆ

ವಿಜ್ಞಾನ ಕ್ಷೇತ್ರದಲ್ಲಿ ಮಾಡಿದ ವಿಶೇಷ ಸಾಧನೆಗಾಗಿ ಸರ್.ಎಂ.ವಿಶ್ವೇಶ್ವರಯ್ಯ ಹೆಸರಿನಲ್ಲಿ ರಾಜ್ಯಮಟ್ಟದ ಪ್ರಶಸ್ತಿಯನ್ನು ಬೆಂಗಳೂರಿನ ಐಐಎಸ್‌ಸಿ ಕೇಂದ್ರದಲ್ಲಿ ವಿತರಣೆ ಮಾಡಿದ್ದು, ಚಳ್ಳಕೆರೆ ತಾಲ್ಲೂಕಿನ ನರಹರಿ ನಗರದ ನರಹರಿಸದ್ಗುರುಪೀಠದ ಪ್ರೊ.ಯಾದಾಟಿ ನರಹರಿಯವರಿಗೆ ರಾಜ್ಯಮಟ್ಟದ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ ಎಂದು ನರಹರಿ ಸದ್ಗುರುಪೀಠದ ವೈ.ರಾಜರಾಮ್ ತಿಳಿಸಿದರು.

ಅವರು, ಈ ಬಗ್ಗೆ ಮಾಹಿತಿ ನೀಡಿ, ಪ್ರತಿವರ್ಷ ಇಂಜಿನಿಯರಿಂಗ್ ಪ್ರತಿಷ್ಠಾನದ ವತಿಯಿಂದ ಹಿರಿಯ ವಿಜ್ಞಾನಿಗಳಿಗೆ ಈ ಗೌರವ ಸಮರ್ಪಣೆಯಾಗುತ್ತಿದ್ದು, ನರಹರಿ ಸದ್ಗುರುಪೀಠದ ಪ್ರಮುಖ ರೂವಾರಿಗಳಾದ ಪ್ರೊ.ಯಾದಾಟಿ ನರಹರಿಯವರಿಗೆ ವಿಜ್ಞಾನ ಮತ್ತು ತಾಂತ್ರಿಕತೆ ವಿಭಾಗದಲ್ಲಿ ಪ್ರಶಸ್ತಿ ಲಭಿಸಿದೆ. ಬೆಂಗಳೂರಿನ ಐಐಎಸ್‌ಸಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ನೀಡಿ ಗೌರವಿಸಿದ್ದು, ಸಂಸ್ಥೆಯ ನಿರ್ದೇಶಕ ಪ್ರೊ.ಎಂ.ಗೋವಿಂದರಂಗರಾಜನ್ ಸೇರಿದಂತೆ ಅನೇಕ ಹಿರಿಯ ವಿಜ್ಞಾನಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಪ್ರೊ.ಯಾದಾಟಿ ನರಹರಿಯವರಿಗೆ ಈ ಪ್ರಶಸ್ತಿ ದೊರಕಿದ್ದಕ್ಕೆ ಚಿತ್ರದುರ್ಗ ಜಿಲ್ಲಾ ಕೆಓಎಫ್ ನಿರ್ದೇಶಕ ರಾಮಜೋಗಿಹಳ್ಳಿ ದೇವರಾಜರೆಡ್ಡಿ, ಆರ್.ನಾಗೇಶ್ ಅಭಿನಂದಿಸಿದ್ದಾರೆ.



ಚಳ್ಳಕೆರೆ ನಗರದ ನರಹರಿಸದ್ಗುರುಪೀಠದ ಪ್ರೊ.ಯಾದಾಟಿ ನರಹರಿಯವರಿಗೆ ಬೆಂಗಳೂರಿನ ಐಐಎಸ್‌ಸಿ ಕೇಂದ್ರದಲ್ಲಿ ವಿಜ್ಞಾನ ಮತ್ತು ತಾಂತ್ರಿಕತೆ ವಿಭಾಗದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

---

**ಪ್ರಮುಖ ಸುದ್ದಿ**

# ಯೋಜನೆಗಳ ಸೌಲಭ್ಯ ಫಲಾನುಭವಿಗಳಿಗೆ ಶೀಘ್ರ ತಲುಪಬೇಕು

» ಮೊದಲ ಪುಟದಿಂದ

ಕಳೆದ ಜೂನ್ ತಿಂಗಳಿನಿಂದ ಈವರೆಗೆ ಜಿಲ್ಲೆಯಾದ್ಯಂತ ದೌರ್ಜನ್ಯ ನಿಯಂತ್ರಣ ಕಾಯ್ದೆಯಡಿ 32 ಹೊಸ ಪ್ರಕರಣಗಳನ್ನು ದಾಖಲಿಸಲಾಗಿದೆ. ಈ ಪೈಕಿ 3 ಪ್ರಕರಣಗಳಲ್ಲಿ ಸುಳ್ಳು ಆರೋಪ ಮಾಡಿರುವುದು ತನಿಖೆಯಿಂದ ಧೃಡಪಟ್ಟಿದೆ. ವಿಶೇಷ ಜಿಲ್ಲಾ ನ್ಯಾಯಾಲಯದಲ್ಲಿ ದೌರ್ಜನ್ಯ ಪ್ರಕರಣಗಳ ವಿಚಾರಣೆ ನಡೆಸಲಾಗುತ್ತಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ ಹೇಳಿದರು.

ಜಿಲ್ಲೆಯಲ್ಲಿ ಪ್ರಸಕ್ತ ತ್ರೈಮಾಸಿಕದಲ್ಲಿ ದಾಖಲಾದ 32 ಪ್ರಕರಣಗಳಲ್ಲಿ 42 ಜನ ಸಂತ್ರಸ್ತರಿದ್ದು, ಇವರೆಗೆ ಒಟ್ಟು ರೂ. 29.77 ಲಕ್ಷ ಪರಿಹಾರ ಧನವನ್ನು ಸಂತ್ರಸ್ತರ ಖಾತೆ ಜಮೆ ಮಾಡಲಾಗಿದೆ. ಜಿಲ್ಲೆಯಲ್ಲಿ ಆಗಸ್ಟ್ ಅಂತ್ಯದ ವೇಳೆ 116 ದೌರ್ಜನ್ಯ ಪಕ್ರರಣಗಳು ದಾಖಲಾಗಿವೆ. ಈ ಪೈಕಿ ಜನವರಿಯಲ್ಲಿ 6, ಫೆಬ್ರವರಿ ಹಾಗೂ ಮಾರ್ಚ್‌ನಲ್ಲಿ 2 ಹಾಗೂ ಏಪ್ರಿಲ್‌ನಲ್ಲಿ 1 ಪ್ರಕರಣಗಳಲ್ಲಿ ಆರೋಪಿಗಳು ನ್ಯಾಯಾಲಯದಿಂದ ಬಿಡುಗಡೆ ಹೊಂದಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸಭೆಯಲ್ಲಿ ಮಾಹಿತಿ ನೀಡಿದರು.



**ಅಕ್ರಮ ಮದ್ಯ ಮಾರಾಟ ತಡೆಗೆ ನಿರ್ದೇಶನ:** ಜಿಲ್ಲೆಯ ಗ್ರಾಮಾಂತರ ಪ್ರದೇಶದಲ್ಲಿ ಪೆಟ್ಟಿಗೆ ಹಾಗೂ ತರಕಾರಿ ಅಂಗಡಿಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಖೇಧಕರ. ಅಬಕಾರಿ ಇಲಾಖೆಯಿಂದ ಹೆಚ್ಚಿನ ದಾಳಿ ನಡೆಸಿ, ಅಕ್ರಮ ಮದ್ಯ ಮಾರಾಟಗಾರರ ಹೆಡೆಮುರಿ ಕಟ್ಟಬೇಕು. ಶಾಲಾ ಕಾಲೇಜು ವಿದ್ಯಾರ್ಥಿಗಳು ಸಹ ಇಂತಹ ಸ್ಥಳಗಲ್ಲಿ ಮದ್ಯ ಖರೀದಿಸಿ ಸೇವನೆ ಮಾಡಿರುವ ಪ್ರಕರಣಗಳು ಜಿಲ್ಲೆಯಲ್ಲಿ ಬೆಳಕಿಗೆ ಬಂದಿವೆ. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ಏರಿಯಾಗಳಲ್ಲಿ ಅಕ್ರಮ ಮದ್ಯ ಮಾರಾಟ ಹೆಚ್ಚಾಗಿ ಕಂಡುಬರುತ್ತಿದೆ ಇವುಗಳ ತಡೆಗೆ ಅಬಕಾರಿ ಇಲಾಖೆ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ ಈ ವರ್ಷ ಜನವರಿಯಿಂದ ಆಗಸ್ಟ್ ವರೆಗೆ ಅಬಕಾರಿ ಇಲಾಖೆಯಿಂದ 1313 ದಾಳಿಗಳನ್ನು ನಡೆಸಲಾಗಿದೆ. ಅಬಕಾರಿ ಕಾಯ್ದೆ ಕಲಂ 15ಎ ಅಡಿ 801 ಹಾಗೂ 61 ಘೋರ ಪ್ರಕರಣಗಳನ್ನು ದಾಖಲಿಸಲಾಗಿದೆ. 1570 ಲೀಟರ್ ಮದ್ಯ, 210 ಲೀಟರ್ ಬಿಯರ್ ಹಾಗೂ ಮದ್ಯ ಸಾಗಾಣಿಕೆಗೆ ಬಳಸಲಾದ 39 ವಾಹನಗಳನ್ನು ಜಪ್ತಿ ಮಾಡಲಾಗಿದೆ ಎಂದು ಅಬಕಾರಿ ಇಲಾಖೆ ಅಧೀಕ್ಷಕರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕಾರ್ಮಿಕ ಇಲಾಖೆಯಿಂದ ಜಿಲ್ಲಾಧ್ಯಂತ 208 ತಪಾಸಣೆ ನಡೆಸಲಾಗಿದೆ. ಈ ಪೈಕಿ 5 ಸ್ಥಳಗಳಲ್ಲಿ ಒಟ್ಟು 6 ಬಾಲ ಕಾರ್ಮಿಕರು ಪತ್ತೆಯಾಗಿದ್ದಾರೆ. ಈ ಸಂಬಂಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಿಸಲಾಗಿದೆ. ಮಕ್ಕಳನ್ನು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರು ಪಡಿಸಲಾಗಿದೆ ಎಂದು ಬಾಲ ಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಮಾಹಿತಿ ನೀಡಿದರು. ಅಂಗನವಾಡಿ ಹಾಗೂ ಆರೋಗ್ಯ ಇಲಾಖೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಸಮಾಜ ಕಲ್ಯಾಣ ಇಲಾಖೆ ಜಂಟಿನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಾಗೃತಿ ಸಮಿತಿ ಸದಸ್ಯರಾದ ಡಿ.ಓ.ಮೊರಾರ್ಜಿ, ಎಂ.ಡಿ.ನವಕೋಟಿ, ಬೋರಸ್ವಾಮಿ, ಹೇಮೇಗೌಡ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಅ.2 ರಂದು ಕೇಂದ್ರ ಸಚಿವ ವಿ.ಸೋಮಣ್ಣ ಜಿಲ್ಲಾ ಪ್ರವಾಸ

» **ಚಿತ್ರದುರ್ಗ**

ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಅಕ್ಟೋಬರ್ 2 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ತುಮಕೂರಿನಿಂದ ರಸ್ತೆ ಮೂಲಕ ಅಂದು ಮಧ್ಯಾಹ್ನ 2.15ಕ್ಕೆ ಚಿತ್ರದುರ್ಗ ನಗರಕ್ಕೆ ಆಗಮಿಸುವ ಅವರು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲು ಮಾರ್ಗದ ಯೋಜನೆ ಭೂ ಸ್ವಾಧೀನ ಕುರಿತು ಅಧಿಕಾರಿಗಳ ಸಭೆ ನಡೆಸುವರು. ನಂತರ ದಾವಣಗೆರೆಗೆ ತೆರಳುವರು ಎಂದು ಸಚಿವರ ಪ್ರವಾಸ ಕಾರ್ಯಕ್ರಮದಲ್ಲಿ ತಿಳಿಸಲಾಗಿದೆ.

### ಬೆಳಗಟ್ಟ: ಉಚ್ಚಂಗಿ ಯಲ್ಲಮ್ಮ ದೇವಿಯ ದೊಡ್ಡರಥೋತ್ಸವದ ಪೂರ್ವಭಾವಿ ಸಭೆ

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬೆಳಗಟ್ಟ ಗ್ರಾಮದಲ್ಲಿ ಉಚ್ಚಂಗಿಯಲ್ಲಮ್ಮ ದೇವಿಯ ದೊಡ್ಡರಥೋತ್ಸವವನ್ನು ಹಮ್ಮಿಕೊಳ್ಳಲಾಗುವುದು ಎಂದು ಟ್ರಸ್ಟ್ ಅಧ್ಯಕ್ಷ ವೈ.ಗಂಗಾಧರಪ್ಪ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ ಪ್ರತಿವರ್ಷದಂತೆ ಈ ವರ್ಷವೂ ಉಚ್ಚಂಗಿ ಯಲ್ಲಮ್ಮ ರಥೋತ್ಸವವನ್ನು ಭಕ್ತಿಶ್ರದ್ಧೆಯಿಂದ ನಡೆಸಲು ಪೂರ್ವಭಾವಿ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ. ರಥೋತ್ಸವದ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಸಿದ್ಧತೆಗಳ ಬಗ್ಗೆ ಸೌಹಾರ್ದ ಚರ್ಚೆ ನಡೆಸಿದ್ದು, ಮುಂದಿನ ದಿನಗಳಲ್ಲಿ ಸಂಪೂರ್ಣ ಮಾಹಿತಿಯನ್ನು ನೀಡಲಾಗುವುದು ಎಂದು ತಿಳಿಸಿದ್ದಾರೆ. ಪೂರ್ವಭಾವಿ ಸಭೆಯಲ್ಲಿ ಟ್ರಸ್ಟ್‌ನ ನಿರ್ದೇಶಕರಾದ ಹುಚ್ಚಣ್ಣ, ಎಸ್. ಆನಂದಪ್ಪ, ಅರುಣ್‌ಕುಮಾರ್, ಬಿ.ಕುಬೇರ, ಸುರೇಶ್, ರಾಘವೇಂದ್ರ, ಕಟ್ಟೆಮನೆ ವಂಶಸ್ಥರಾದ ಶಿವಲಿಂಗಪ್ಪ, ಗೌಡಗೆರೆತಿಪ್ಪೇಸ್ವಾಮಿ, ಹನುಮಂತಪ್ಪ, ರುದ್ರಮುನಿ, ಅಂಜಿನಪ್ಪ, ಪೂಜಾರಿ ತಿಪ್ಪೇಸ್ವಾಮಿ ಮುಂತಾದವರು ಭಾಗವಹಿಸಿದ್ದರು.

### ರಾಜ್ಯ ನಿವೃತ್ತ ನೌಕರರ ವೇದಿಕೆ ಇಂದು ಸತ್ಯಾಗ್ರಹ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ನಿವೃತ್ತ ನೌಕರರ ವೇದಿಕೆ ಚಿತ್ರದುರ್ಗ ಜಿಲ್ಲಾ ಘಟಕದವತಿಯಿಂದ ಕರ್ನಾಟಕ ಸರ್ಕಾರವು ಜಾರಿಗೆ ತಂದಿರುವ 07 ನೇ ವೇತನ ಆಯೋಗದ ವರದಿಯಲ್ಲಿ ದಿನಾಂಕ : 01–07–2022 ರಿಂದ ವೇತನ ನಿಗದಿಗೊಳಿಸಲು ಅವಕಾಶ ನೀಡಿ ಆರ್ಥಿಕ ಸೌಲಭ್ಯವು 01–08–2024 ರಿಂದ ದೊರೆಯವಂತೆ ಆದೇಶಿಸುವಂತೆ ಆಗ್ರಹಿಸಿ ಆ. 1 ರಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಕಪ್ಪು ಪಟ್ಟಿಯನ್ನು ಧರಿಸಿ ಧರಣಿ ಸತ್ಯಾಗ್ರಹವನ್ನು ಹಮ್ಮಿಕೊಂಡಿರುವುದಾಗಿ ರಾಜ್ಯ ಸಂಚಾಲಕರಾದ ಹೆಚ್.ಗೋವಿಂದಯ್ಯ ತಿಳಿಸಿದ್ದಾರೆ. ದಿನಾಂಕ 01–07–2022 ರಿಂದ 31–07–2024 ರ ಅವಧಿಯಲ್ಲಿ ನಿವೃತ್ತರಾದ, ನಿಧನರಾದ ಅಧಿಕಾರಿಗಳೂ ಹಾಗೂ ನೌಕರರಿಗೂ ಸಹ ದಿನಾಂಕ : 01–07–2022 ರಿಂದ ವೇತನ ನಿಗದಿಗೊಳಿಸಿ ನಿವೃತ್ತಿ ವೇತನವನ್ನು ಪುನರ್ ನಿಗದಿಗೊಳಿಸಿ ಆರ್ಥಿಕ ಸೌಲಭ್ಯವು ದಿನಾಂಕ : 01–08–2024 ರಿಂದ ದೊರೆಯುವಂತೆ ಆದೇಶಿಸಿದೆ. ಆದರೆ ಈ ಅವಧಿಯಲ್ಲಿ ನಿವೃತ್ತರಾದ/ನಿಧನರಾದ ಅಧಿಕಾರಿಗಳೂ ಹಾಗೂ ನೌಕರರಿಗೆ 07 ನೇ ವೇತನ ಆಯೋಗದ ವರದಿಯನುಸಾರ ಕೇವಲ ನಿವೃತ್ತಿ ವೇತನ ಸೌಲಭ್ಯವನ್ನು ಮಾತ್ರ ನೀಡಿ, DCRG, Commutation ಹಾಗೂ ಗಳಿಕೆ ರಜೆ ನಗದೀಕರಣಕ್ಕೆ ಸಂಬಂಧಿಸಿದ ಆರ್ಥಿಕ ಸೌಲಭ್ಯವನ್ನು 2018 ರಲ್ಲಿ ಜಾರಿಗೆ ತರಲಾದ ಆರನೇ ವೇತನ ಆಯೋಗದ ಅನುಸಾರ ನೀಡಲು ಆದೇಶಿಸಿದೆ. ಪ್ರಯುಕ್ತ ಆಗಿರುವ ಅನ್ಯಾಯವನ್ನು ಖಂಡಿಸಿ, ನಮಗೆ ನ್ಯಾಯವಾಗಿ ದೊರಕಬೇಕಾದ 07 ನೇ ವೇತನ ಆಯೋಗದ ಅನುಸಾರ ಆಅಖಉ, ಅಂಟಟಣಾಚಿಣುಂಟ ಹಾಗೂ ಗಳಿಕೆ ರಜೆ ನಗದೀಕರಣ ಸೌಲಭ್ಯಗಳನ್ನು ಪಡೆಯುವ ಸಲುವಾಗಿ ಸರ್ಕಾರದ ಗಮನ ಸೆಳೆಯಲು, ಜಿಲ್ಲಾಧಿಕಾರಿಗಳ ಮೂಲಕ ಮುಖ್ಯ ಮಂತ್ರಿಗಳಿಗೆ ಮನವಿ ಸಲ್ಲಿಸಲು ವಿಶ್ವ ಹಿರಿಯ ನಾಗರೀಕರ ದಿನಾಚರಣೆಯ ದಿನವಾದ ಅ. 1 ರಂದು ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಕಪ್ಪು ಪಟ್ಟಿ ಧರಿಸಿ ಧರಣಿ ಸತ್ಯಾಗ್ರಹವನ್ನು ಕರ್ನಾಟಕ ರಾಜ್ಯ ನಿವೃತ್ತ ನೌಕರರ ವೇದಿಕೆಯ ವತಿಯಿಂದ ನಡೆಸಲು ನಿರ್ಧರಿಸಿದೆ. ಅಂದಿನ ಧರಣಿ ಸತ್ಯಾಗ್ರಹಕ್ಕೆ ದಿನಾಂಕ 01–07–2022 ರಿಂದ 31–07–2024 ರ ಅವಧಿಯಲ್ಲಿ ನಿವೃತ್ತರಾದ ಎಲ್ಲಾ ನೌಕರರು ಭಾಗವಹಿಸುವುದರ ಮೂಲಕ ಧರಣಿಯನ್ನು ಯಶಸ್ವಿಗೊಳಿಸುವಂತೆ ಜಿಲ್ಲಾ ಸಂಚಾಲಕರಾದ ರಮೇಶ್, ತಾಲ್ಲೂಕು ಸಂಚಾಲಕರಾದ ಹನುಮಂತಪ್ಪ ಷಡಾಕ್ಷರಪ್ಪ ಮನವಿ ಮಾಡಿದ್ದಾರೆ.

### ಅ.2 ರಂದು ಮಾಂಸ ಮಾರಾಟ ನಿಷೆಧ

» **ಹೊಸದುರ್ಗ**

ಅ.2 ರಂದು ಬುಧವಾರ ಗಾಂಧಿಜಯಂತಿ ಇರುವುದರಿಂದ ಪಟ್ಟಣದ ವ್ಯಾಪ್ತಿಯಲ್ಲಿ ಬರುವ ಮಾಂಸದಂಗಡಿಗಳನ್ನು ತೆರೆಯದಂತೆ ನಿಷೇಧಿಸಲಾಗಿದೆ ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶರಣಸಂಸ್ಕೃತಿ ಉತ್ಸವದ ಆಹ್ವಾನ ಪತ್ರಿಕೆ ಬಿಡುಗಡೆ

» **ಚಿತ್ರದುರ್ಗ**



ನಗರದ ಶ್ರೀ ಮುರುಘರಾಜೇಂದ್ರ ಬೃಹನ್ಮಠದಲ್ಲಿಂದು 2024ನೇ ಸಾಲಿನ ಶರಣಸಂಸ್ಕೃತಿ ಉತ್ಸವ ಹಾಗೂ ಶ್ರೀ ಜಯದೇವ ಮುರುಘರಾಜೇಂದ್ರ ಮಹಾಸ್ವಾಮಿಗಳವರ 150ನೇ ಜಯಂತ್ಯುತ್ಸವದ ಆಹ್ವಾನ ಪತ್ರಿಕೆಯನ್ನು ಬಿಡುಗಡೆಗೊಳಿಸಲಾಯಿತು.

ಶ್ರೀಮಠದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಆಡಳಿತ ಮಂಡಳಿ ಸದಸ್ಯರಾದ ಡಾ. ಬಸವಕುಮಾರ ಸ್ವಾಮಿಗಳು, ಜಯದೇವ ಜಗದ್ಗುರುಗಳು ಮಾಡದ ಕೆಲಸಗಳು ಇಲ್ಲ. ಜಯದೇವ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡಿ ಉನ್ನತ ಹುದ್ದೆಯಲ್ಲಿರುವವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಗುವುದು. ಶ್ರೀಗಳ ಸತ್ಕಾರ್ಯಗಳನ್ನು ನಾಡಿಗೆ ತಿಳಿಸುವ ಕೆಲಸ ಮಾಡಲಾಗುವುದು. ಪೂಜ್ಯರು ಅನೇಕ ಸಂಘ ಸಂಸ್ಥೆಗಳಿಗೆ ದಾನ ಮಾಡಿರುತ್ತಾರೆ. ಅವರು ಸುತ್ತುಕಟ್ಟು ಎಂಬ ಮಂತ್ರದಂತೆ ಕಾರ್ಯನಿರ್ವಹಿಸಿರುತ್ತಾರೆ. ಜಯದೇವ ಜಗದ್ಗುರುಗಳ ಕಾಲವನ್ನು ಸುವರ್ಣ ಯುಗವೆಂದು ಕರೆಯುತ್ತಾರೆ ಎಂದರು.

ಅಕ್ಟೋಬರ್ 5 ರಿಂದ 13 ರವರೆಗೆ ನಡೆಯುವ ವಿವಿಧ ಕಾರ್ಯಕ್ರಮಗಳ ಮಾಹಿತಿ ನೀಡಿದ ಶ್ರೀಗಳು, ಪ್ರತಿದಿನ ಬೆಳಗ್ಗೆ ಸಹಜಶಿವಯೋಗ ನಡೆಯಲಿದ್ದು, ಶ್ರೀ ಶಾಂತವೀರ ಗುರುಮುರುಘರಾಜೇಂದ್ರ ಸ್ವಾಮಿಗಳು, ಶ್ರೀ ಗುರುಮಹಾಂತ ಸ್ವಾಮಿಗಳು, ಡಾ. ಮರುಳಸಿದ್ದ ಸ್ವಾಮಿಗಳು ಶಿವಯೋಗ ಪ್ರಾತ್ಯಕ್ಷಿಕೆ ನಡೆಸಿಕೊಡುವರು. ಅಕ್ಟೋಬರ್ 5 ಜಯದೇವ ಕಪ್ ಕ್ರೀಡಾಕೂಟ ಅಂಗವಾಗಿ ಮೋಟಾರ್ ಬೈಕ್ ಜಾಥಾ ನಡೆಯಲಿದ್ದು, ನಗರಸಭೆ ಅಧ್ಯಕ್ಷೆ ಶ್ರೀಮತಿ ಸುಮಿತ ರಾಘವೇಂದ್ರ ಜಾಥಾವನ್ನು ಉದ್ಘಾಟಿಸುವರು.

ದಿ. 5.10.24ರಂದು ಬೆಳಗ್ಗೆ 10.00 ಗಂಟೆಗೆ ವಚನಕಮ್ಮಟ ಗೋಷ್ಠಿ – 1 ಅಷ್ಟಾವರಣ ನಡೆಯಲಿದೆ. ಬೆಳಗ್ಗೆ 10.30ಕ್ಕೆ ಸಾಮೂಹಿಕ ವಿವಾಹ ನಡೆಯಲಿದ್ದು ಶ್ರೀ ಮಹಾಂತ ರುದ್ರೇಶ್ವರ ಸ್ವಾಮಿಗಳು ಸಮ್ಮುಖ ವಹಿಸುವರು. ಮಧ್ಯಾಹ್ನ 3.00 ಗಂಟೆಗೆ ನಡೆಯುವ ವಚನ ಕಮ್ಮಟ ಪರೀಕ್ಷೆ ರ್‍ಯಾಂಕ್ ವಿಜೇತರಿಗೆ ಬಹುಮಾನ ವಿತರಣೆ ಸಮಾರಂಭದಲ್ಲಿ ಶ್ರೀ ಶಿವಮೂರ್ತಿ ಮುರುಘರಾಜೇಂದ್ರ ಸ್ವಾಮಿಗಳು ಹಿರೇಮಾಗಡಿ ಇವರು ಸಮ್ಮುಖ ವಹಿಸುವರು. ಮಧ್ಯಾಹ್ನ 4.00 ಗಂಟೆಗೆ ಜಯದೇವ ಕಪ್ ಪಂದ್ಯಾವಳಿ ಅಂಗವಾಗಿ ಅಂಬೇಡ್ಕರ್ ವೃತ್ತದಲ್ಲಿ ಶ್ರೀ ಜಯದೇವ ಶ್ರೀಗಳ ಬೆಳ್ಳಿಮೂರ್ತಿಯ ಪಲ್ಲಕ್ಕಿ ಉತ್ಸವ ಹಾಗೂ ಪಥ ಸಂಚಲನ ಪ್ರಾರಂಭವಾಗಲಿದ್ದು, ಸಂಸದ ಗೋವಿಂದ ಎಂ.ಕಾರಜೋಳ ಅವರು ಪಥ ಸಂಚಲನವನ್ನು ಉದ್ಘಾಟಿಸುವರು. ಸಂಜೆ 6 ಗಂಟೆಗೆ ನಡೆಯುವ ಶ್ರೀ ಜಯದೇವ ಕಪ್ ಹೊನಲು ಬೆಳಕಿನ ಕ್ರೀಡಾಕೂಟವನ್ನು ಕಾರ್ಮಿಕ ಸಚಿವ ಸಂತೋಷ್ ಲಾಡ್ ಉದ್ಘಾಟಿಸುವರು. ಕಾರ್ಯಕ್ರಮದಲ್ಲಿ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮಿಗಳು ಮತ್ತು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮಿಗಳು ಸಮ್ಮುಖ ವಹಿಸಲಿದ್ದು, ಸಂಸದ ಬಿ.ವೈ. ರಾಘವೇಂದ್ರ, ರಾಜ್ಯ ಲಿಡ್ಕರ್ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ್, ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಮಾಜಿ ಸಂಸದ ಬಿ.ಎನ್. ಚಂದ್ರಪ್ಪ ಮೊದಲಾದವರು ಭಾಗವಹಿಸುವರು.

ದಿ. 6.10.24ರಂದು ಬೆಳಗ್ಗೆ 10 ಗಂಟೆಗೆ ವಚನಕಮ್ಮಟ ಗೋಷ್ಠಿ–2 ಪಂಚಾಚಾರ, ಮಹಿಳಾ ಕ್ರೀಡಾಕೂಟದಲ್ಲಿ ವಿವಿಧ ಕ್ರೀಡೆಗಳು ನಡೆಯಲಿವೆ. ದಿ. 7.10.24ರಂದು ಬೆಳಗ್ಗೆ 10.00 ಗಂಟೆಗೆ ವಚನಕಮ್ಮಟ ಗೋಷ್ಠಿ–3 ಷಟ್‌ಸ್ಥಲ ನಡೆಯಲಿದೆ. ಸಂಜೆ 6.00 ಗಂಟೆಗೆ ಜಯದೇವ ಕಪ್ ಸಮಾರೋಪ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭ ಹಳೆಯ ಮಾಧ್ಯಮಿಕ ಶಾಲಾ ಆವರಣದಲ್ಲಿ ನಡೆಯಲಿದ್ದು, ಶ್ರೀ ಶಿವಬಸವ ಗುರು ಮುರುಘರಾಜೇಂದ್ರ ಸ್ವಾಮಿಗಳು, ಅಥಣಿ ಇವರು ಸಮ್ಮುಖ ವಹಿಸುವರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಿಜೇತರಿಗೆ ಬಹುಮಾನ ವಿತರಣೆ ಮಾಡುವರು. ಮುಖ್ಯಅತಿಥಿಗಳಾಗಿ ಮಾಜಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಮುರುಳಿಧರ ಹಾಲಪ್ಪ, ಬಳ್ಳಾರಿ ಹನುಮಂತಪ್ಪ, ಡಾ. ವೈ. ರಾಮಪ್ಪ, ಉಮೇಶ ಕಾರಜೋಳ, ಎನ್.ಲೋಕೇಶ್‌ಗೌಡ, ಬಿ. ಜನಾರ್ದನಸ್ವಾಮಿ, ಜಿ.ಎಸ್. ಅನಿತ್, ಮಹಾಲಿಂಗಪ್ಪ ಕುಂಚಿಗನಾಳ್, ಡಾ. ಸಿ.ವಿ.ಹರೀಶ್ ಪಾಲ್ಗೊಳ್ಳುವರು.

ದಿ. 8.10.24ರಂದು ಬೆಳಗ್ಗೆ 7.30 ಗಂಟೆಗೆ ಅನುಭವ ಮಂಟಪ ಮುಂಭಾಗ ಬೆಂಗಳೂರು ಬಸವ ಸಮಿತಿ ಅಧ್ಯಕ್ಷ ಅರವಿಂದ ಜತ್ತಿ ಬಸವತತ್ತ್ವ ಧ್ವಜಾರೋಹಣ ನೆರವೇರಿಸುವರು. ಬೆಳಗ್ಗೆ 10 ಗಂಟೆಗೆ ಕೃಷಿ ಮತ್ತು ಕೈಗಾರಿಕೆ ವಸ್ತು ಪ್ರದರ್ಶನ ಏರ್ಪಾಡಾಗಿದ್ದು, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ವಸ್ತು ಪ್ರದರ್ಶನವನ್ನು ಉದ್ಘಾಟಿಸುವರು. ನಂತರ ನಡೆಯುವ ಕೃಷಿ ಮೇಳವನ್ನು ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ಉದ್ಘಾಟಿಸುವರು. ತುಮಕೂರು ಸಿದ್ಧಗಂಗಾಮಠದ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು, ಹೊಸದುರ್ಗ ಕುಂಚಿಟಿಗ ಸಂಸ್ಥಾನದ ಡಾ. ಶಾಂತವೀರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಮುಖ್ಯಅತಿಥಿಗಳಾಗಿ ಸಚಿವರುಗಳಾದ ಎಚ್.ಕೆ. ಪಾಟೀಲ್, ಎಸ್.ಎಸ್. ಮಲ್ಲಿಕಾರ್ಜುನ್, ಶರಣಬಸಪ್ಪ ದರ್ಶನಾಪೂರ, ಶಾಸಕ ದರ್ಶನ್ ಪುಟ್ಟಣ್ಣಯ್ಯ ಭಾಗವಹಿಸುವರು. ಸಂಜೆ 6 ಗಂಟೆಗೆ ಶ್ರೀ ಜಯದೇವ ಜಗದ್ಗುರುಗಳ 150ನೇ ಜಯಂತ್ಯುತ್ಸವದ ಸಾನ್ನಿಧ್ಯವನ್ನು ಶ್ರೀ ಜಗದ್ಗುರು ಪಂಚಮ ಶಿವಲಿಂಗೇಶ್ವರ ಸ್ವಾಮಿಗಳು, ಡಾ. ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು. ಮುಖ್ಯಅತಿಥಿಗಳಾಗಿ ಸಚಿವರುಗಳಾದ ಡಿ. ಸುಧಾಕರ್, ಈಶ್ವರ ಖಂಡ್ರೆ, ಶಾಸಕರಾದ ಕೆ.ಸಿ. ವೀರೇಂದ್ರ ಪಪ್ಪಿ, ಲಕ್ಷ್ಮಣ ಸವದಿ, ಟಿ. ರಘುಮೂರ್ತಿ, ಎನ್.ವೈ. ಗೋಪಾಲಕೃಷ್ಣ, ಬಿ.ಜಿ.ಗೋವಿಂದಪ್ಪ, ಡಾ. ಮಹೇಶ್ ಜೋಶಿ ಭಾಗವಹಿಸುವರು.

ದಿ. 9.10.24ರಂದು ಬೆಳಗ್ಗೆ 10.00 ಗಂಟೆಗೆ ಜಯದೇವ ಜಗದ್ಗುರುಗಳ ಜೀವನ ಮತ್ತು ಸಾಧನೆ ಕುರಿತು ವಿಷಯ ಚಿಂತನೆ ನಡೆಯಲಿದೆ. ಸಂಜೆ 6 ಗಂಟೆಗೆ ಜಯದೇವ ಜಗದ್ಗುರುಗಳ ಜಯಂತ್ಯುತ್ಸವದಲ್ಲಿ ಶ್ರೀ ಜ. ಪ್ರಸನ್ನಾನಂದ ವಾಲ್ಮೀಕಿ ಸ್ವಾಮಿಗಳು, ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಧಾರವಾಡ ಇವರುಗಳು ಸಾನ್ನಿಧ್ಯವಹಿಸುವರು. ಮುಖ್ಯಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಜಗದೀಶ್ ಶೆಟ್ಟರ್, ಬಸವರಾಜ ಬೊಮ್ಮಾಯಿ, ಕೇಂದ್ರ ಸಚಿವ ವಿ.ಸೋಮಣ್ಣ, ಶಾಸಕರಾದ ಎಂ. ಚಂದ್ರಪ್ಪ, ಕೆ.ಎಸ್. ನವೀನ್, ಜಿ.ಎಂ.ಸಿದ್ದೇಶ್ವರ, ಜಿ.ಹೆಚ್. ತಿಪ್ಪಾರೆಡ್ಡಿ, ಎಚ್.ಎಸ್. ಶಿವಶಂಕರ್, ಡಾ. ಸಿ.ಎನ್. ಮಂಜುನಾಥ್, ಸಿ. ಸೋಮಶೇಖರ್ ಡಾ. ಕೆ.ಎಸ್. ರವೀಂದ್ರನಾಥ್, ಜಯವಿಭವಸ್ವಾಮಿ ಅವರುಗಳು ಭಾಗವಹಿಸುವರು.

ದಿ. 10.10.24ರಂದು ಸಂಜೆ 6 ಗಂಟೆಗೆ ನಡೆಯುವ ಜಯದೇವ ಜಗದ್ಗುರುಗಳವರ ಜಯಂತ್ಯುತ್ಸವದಲ್ಲಿ ಡಾ. ವೀರಭದ್ರ ಚನ್ನಮಲ್ಲ ದೇಶೀಕೇಂದ್ರ ಶಿವಾಚಾರ್ಯಸ್ವಾಮಿಗಳು, ಬೇಲಿಮಠದ ಶ್ರೀ ಶಿವರುದ್ರ ಸ್ವಾಮಿಗಳು, ಹಿರೇಮಠ ಸಂಸ್ಥಾನದ ಡಾ. ಮ.ಘ.ಚ. ಬಸವಲಿಂಗ ಸ್ವಾಮಿಗಳು ಭಾಲ್ಕಿ ಇವರುಗಳು ಸಾನ್ನಿಧ್ಯ ವಹಿಸುವರು. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಜಯದೇವ ದಿಗ್ವಿಜಯ ಸಂಸ್ಮರಣ ಸಂಪುಟ ಬಿಡುಗಡೆ ಮಾಡಲಿದ್ದಾರೆ. ಡಿ.ಕೆ. ಶಿವಕುಮಾರ್, ಬಸವರಾಜ ಹೊರಟ್ಟಿ, ಶ್ರೀಮತಿ ಲಕ್ಷ್ಮೀ ಹೆಬ್ಬಾಳ್ಕರ್, ಶಿವಾನಂದ ಎಸ್. ಪಾಟೀಲ್, ವಿಜಯಸಂಕೇಶ್ವರ, ವಿಜಯಾನಂದ ಕಾಶಪ್ಪನವರ್ ಮುಖ್ಯಅತಿಥಿಗಳಾಗಿ ಭಾಗವಹಿಸುವರು.

ದಿ. 11.10.24 ರಂದು ಮಹಿಳಾ ಸಮಾವೇಶ ನಡೆಯಲಿದ್ದು, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಶಾಸಕರಾದ ಎಂ.ಪಿ. ಲತಾ ಮಲ್ಲಿಕಾರ್ಜುನ್, ಶಶಿಕಲಾ ಜೊಲ್ಲೆ, ಶ್ರೀಮತಿ ಕೆ. ಪೂರ್ಣಿಮಾ ಶ್ರೀನಿವಾಸ್, ಶ್ರೀಮತಿ ಎಸ್. ರಶ್ಮಿ ಭಾಗವಹಿಸುವರು.

ದಿ. 12.10.24 ರಂದು ಬೆಳಗ್ಗೆ 10.30 ಗಂಟೆಗೆ ಶರಣಸಂಸ್ಕೃತಿ ಉತ್ಸವ ಹಾಗೂ ಜಾನಪದ ಕಲಾಮೇಳ ಆರಂಭವಾಗಲಿದ್ದು, ಡಾ. ಪುರುಷೋತ್ತಮಾನಂದಪುರಿ ಮಹಾಸ್ವಾಮಿಗಳು ಚಾಲನೆ ನೀಡುವರು. ಸಂಜೆ 4.30 ಗಂಟೆಗೆ ಮೇಲುದುರ್ಗದ ಶ್ರೀ ಮುರುಘಾಮಠದ ಆವರಣದಲ್ಲಿ ಶ್ರೀಗಳಿಗೆ ಭಕ್ತಿ ಸಮರ್ಪಣೆ ಕಾರ್ಯಕ್ರಮ ನಡೆಯಲಿದೆ. ಸಂಜೆ 6 ಗಂಟೆಗೆ ಮಕ್ಕಳ ಸಂಭ್ರಮ ನಡೆಯಲಿದೆ.

ದಿ. 13.10.24ರಂದು ಶ್ರೀಮಠದ ಆವರಣದಲ್ಲಿ ಬೆಳಗ್ಗೆ 9.30 ಗಂಟೆಗೆ ಶ್ರೀ ಮುರಿಗೆ ಶಾಂತವೀರ ಸ್ವಾಮಿಗಳವರ ಮೂರ್ತಿಯ ಶೂನ್ಯಪೀಠಾರೋಹಣ, ಬೆಳಗ್ಗೆ 11 ಗಂಟೆಗೆ ಬಸವಣ್ಣನವರ ಮತ್ತು ಅಲ್ಲಮಪ್ರಭುದೇವರ ಭಾವಚಿತ್ರ ಹಾಗೂ ಪ್ರಾಚೀನ ಹಸ್ತಪ್ರತಿಗಳ ಮೆರವಣಿಗೆ, 11.30 ಗಂಟೆಗೆ ಜಯದೇವ ಜಂಗೀ ಕುಸ್ತಿ, ಶ್ವಾನ ಪ್ರದರ್ಶನ ನಡೆಯಲಿದೆ. ಸಂಜೆ 6 ಗಂಟೆಗೆ ಸಾಂಸ್ಕೃತಿಕ ಸಮಾರಂಭ ನಡೆಯಲಿದ್ದು, ಡಾ.ಸಾರಂಗಧರ ದೇಶೀಕೇಂದ್ರ ಸ್ವಾಮಿಗಳು, ಶ್ರೀ ಶಿವಲಿಂಗಾನಂದ ಸ್ವಾಮಿಗಳು, ಶ್ರೀ ಶಿವಾನಂದ ಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಹಂಪಿ ವಿ.ವಿ. ಕುಲಪತಿ ಡಾ. ಪರಮಶಿವಮೂರ್ತಿ, ಮಹಿಮಾ ಜೆ.ಪಟೇಲ್, ಈ ಕೃಷ್ಣಪ್ಪ, ಸಂಗಮೇಶ್ ಬಬಲೇಶ್ವರ, ಬಿ.ಆರ್. ಅಶೋಕ್‌ಕುಮಾರ್, ಮಾರಸಂದ್ರ ಮುನಿಯಪ್ಪ, ಮಹಮ್ಮದ್ ರಫಿ ಪಾಷ ಮುಖ್ಯಅತಿಥಿಗಳಾಗಿ ಭಾಗವಹಿಸುವರು ಎಂದು ತಿಳಿಸಿದರು. ಕೆ.ಸಿ.ನಾಗರಾಜ್, ಶ್ರೀಮತಿ ಸುನಿತಾ ಮಲ್ಲಿಕಾರ್ಜುನ್ ಮಾತನಾಡಿದರು. ಗುರುಮಠಕಲ್‌ನ ಶ್ರೀ ಶಾಂತವೀರಗುರುಮುರುಘರಾಜ 'ೇಂದ್ರ ಸ್ವಾಮಿಗಳು, ಸಾಯಿಗಾವ, ಶ್ರೀ ಬಸವನಾಗಿದೇವ ಸ್ವಾಮಿಗಳು, ನಗರಸಭೆ ಸದಸ್ಯ ಕೆ.ಸಿ. ಸುರೇಶ್, ಎಸ್. ಪರಮೇಶ್, ಶ್ರೀಮತಿ ಮೋಕ್ಷ ರುದ್ರಸ್ವಾಮಿ, ಡಿ.ಎಸ್. ಮಲ್ಲಿಕಾರ್ಜುನ್, ಕಣಿವೆಮಾರಮ್ಮ ತಿಪ್ಪೇಸ್ವಾಮಿ, ವೀರಶೈವ ಸಮಾಜದ ಕಾರ್ಯದರ್ಶಿ ಪಿ. ವೀರೇಂದ್ರಕುಮಾರ್, ಶಶಿಧರಬಾಬು, ಅಂಜಿನಪ್ಪ, ಶ್ರೀಮತಿ ಲತಾ ಉಮೇಶ್, ಎಂ. ಶಂಕರಮೂರ್ತಿ ಇದ್ದರು.

## ಗಾಂಧಿ ನಡಿಗೆ 100 ವರ್ಷ: ನಾಳೆ ಅದ್ದೂರಿ ಆಚರಣೆ

» **ಚಿತ್ರದುರ್ಗ**




ಅಖಿಲ ಭಾರತ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಬೆಳಗಾವಿ ಅಧಿವೇಶನವನ್ನು ಮಹಾತ್ಮ ಗಾಂಧಿ ರವರು ನಡೆಸಿಕೊಟ್ಟು ಇಂದಿಗೆ ನೂರು ವರ್ಷ ಸಂಪೂರ್ಣವಾಗಿರುವ ಹಿನ್ನೆಲೆಯಲ್ಲಿ ಮುಂಬರುವ ಗಾಂಧಿ ಜಯಂತಿ ಕಾರ್ಯಕ್ರಮವನ್ನು ಗಾಂಧಿ ಭಾರತ ಹೆಸರಿನ ಅಡಿಯಲ್ಲಿ ವರ್ಷಪೂರ್ತಿ ಆಚರಿಸಲು ಕೈಗೊಳ್ಳಬೇಕಾಗಿದೆ ಜೊತೆಗೆ ಆ.2 ರಂದು ನಡೆಯವ ಗಾಂಧಿಜಿಯವರ ಜಯಂತಿ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಣೆ ಮಾಡಬೇಕಿದೆ ಎಂದು ಕೆಪಿಸಿಸಿ ಉಪಾಧ್ಯಕ್ಷರು, ಕೌಶಲ್ಯ ಅಭೀವೃದ್ಧಿ ನಿಗಮದ ಮಾಜಿ ಅಧ್ಯಕ್ಷರಾದ ಮುರಳೀಧರ ಹಾಲಪ್ಪ ಕಾಂಗ್ರೆಸ್ ಮುಖಂಡರಿಗೆ ಕಾರ್ಯಕರ್ತರಿಗೆ ಕರೆ ನೀಡಿದರು.

ಚಿತ್ರದುರ್ಗ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ಸಂಜೆ ಹಮ್ಮಿಕೊಂಡಿದ್ದ ಗಾಂಧಿ ನಡಿಗೆ ಸಿದ್ಧತೆಗಳ ಬಗ್ಗೆ ಪೂರ್ವಸಿದ್ಧತೆಗಳ ಬಗ್ಗೆ ಚರ್ಚಿಸಲು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು, ಕೆ.ಪಿ.ಸಿ.ಸಿ ಅಧ್ಯಕ್ಷರಾದ ಡಿ. ಕೆ. ಶಿವಕುಮಾರ್ ಅವರ ನಿರ್ದೇಶನದಂತೆ ಗಾಂಧಿ ಜಯಂತಿಯನ್ನು "ಗಾಂಧಿ ನಡಿಗೆ 100 ವರ್ಷ" ಎಂಬ ಘೋಷಣೆಯೊಂದಿಗೆ ಅದ್ದೂರಿಯಾಗಿ ಆಚರಿಸ ಬೇಕಾಗಿರುವ ಹಿನ್ನಲೆಯಲ್ಲಿ ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆಯನ್ನು ನಡೆಸಲಾಗುತ್ತಿದೆ ಇಲ್ಲಿ ಅಂದು ನಡೆಯ ಬೇಕಾದ ಕಾರ್ಯಕ್ರಮಗಳ ಬಗ್ಗೆ ತಯಾರಿಯನ್ನು ನಡೆಸಲಾಗುವುದು. ಗಾಂಧೀಜಿಯವರು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ನೇತೃತ್ವವನ್ನು ವಹಿಸಿಕೊಂಡು ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷದ 29ನೇ ಆಧಿವೇಶನಕ್ಕೆ ಈಗ ನೂರ ಸಂಭ್ರಮವಾಗಿದೆ. ಗಾಂಧಿಜಿಯವರು 1924ರ ಡಿಸೆಂಬರ್ 26–27 ರಂದು ಬೆಳಗಾವಿಯಲ್ಲಿ ಅಧ್ಯಕ್ಷತೆವಹಿಸಿದ ಮೊದಲನೇ ಹಾಗೂ ಕೊನೆಯ ಅಧಿವೇಶನವಾಗಿದೆ.



3.9 ಕೋಟಿ ರೂ.ವೆಚ್ಚದ ಪೊಲೀಸ್ ವಸತಿ ಗೃಹಗಳ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಿದ ಶಾಸಕ ಡಾ.ಎಂ.ಚಂದ್ರಪ್ಪ.

**ಪ್ರಮುಖ ಸುದ್ದಿ**

# ಪುಸ್ತಕವನ್ನು ಓದುವುದರಿಂದ ಉತ್ತಮವಾದ ಬದುಕು

» **ಚಿತ್ರದುರ್ಗ**




ಪುಸ್ತಕವನ್ನು ಓದುವುದರಿಂದ ಉತ್ತಮವಾದ ಬದುಕನ್ನು ರೂಪಿಸಿಕೊಳ್ಳಬಹುದಾಗಿದೆ. ಇದ್ದಲ್ಲದೆ ಓದುವುರಿಂದ ಆತ್ಮವಿಶ್ವಾಸ ಮೂಡುತ್ತದೆ, ತಮ್ಮ ಜ್ಞಾನವನ್ನು ಸಹಾ ವೃದ್ದಿಸುತ್ತದೆ ಎಂದು ಚಿಂತಕರು ನಿವೃತ್ತ ಪ್ರಾಂಶುಪಾಲರಾದ ಜೆ.ಯಾದವ್ ರೆಡ್ಡಿ ತಿಳಿಸಿದರು.

ದಾವಣಗೆರೆ ವಿಶ್ವ ವಿದ್ಯಾಲಯ, ನಗರದ ಪಿಳ್ಳೇಕೇರನಹಳ್ಳಿಯ ಬಾಪೂಜಿ ಶಿಕ್ಷಣ ಮಹಾ ವಿದ್ಯಾಲಯದವತಿಯಿಂದ ಬಾಪೂಜಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ದಸರಾ ಸಾಹಿತ್ಯ ಸಿರಿಯಡಿಯಲ್ಲಿ ಪರಮೇಶ್ವರಪ್ಪ ಕುದರಿಯವರ ಗಣ್ಯರ ಸಂದರ್ಶನದ ಮನದಂಗಳ ಹಾಗೂ ಕಥಾ ಸಂಕಲನವಾದ ಕೊನೆಗೂ ಅರ್ಥವಾಗದವಳು ಕೃತಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಇಂದಿನ ದಿನಮಾನದಲ್ಲಿ ಜನತೆಯಲ್ಲಿ ಓದುವ ಸಂಸ್ಕೃತಿ ಕಡಿಮೆಯಾಗುತ್ತಿದೆ, ಎಲ್ಲರು ನೋಡುವ ಸಂಸ್ಕೃತಿ ಹೆಚ್ಚಾಗುತ್ತಿದೆ. ಇದರಿಂದ ನಮ್ಮಲ್ಲರ ಜ್ಞಾನ ಕಡಿಮೆಯಾಗುತ್ತದೆ. ಓದುವ ಸಮಯದಲ್ಲಿ ಸಿಕ್ಕ ಪುಸ್ತಕಗಳನ್ನು ಓದುವ ಹವ್ಯಾಸವನ್ನು ಬೆಳಸಿಕೊಳ್ಳಬೇಕಿದೆ, ಇದರಿಂದ ನಮ್ಮ ಜ್ಞಾನ ವೃದ್ದಿಯಾಗುತ್ತದೆ. ಪುಸ್ತಕ ಜ್ಞಾನದಿಂದ ಜಗತ್ತನ್ನೇ ಗೆಲ್ಲಬಹುದಾಗಿದೆ. ಪುಸ್ತಕ ಸಂಸ್ಕೃತಿ ಎಂದಿಗೂ ಸಹಾ ನಾಶವಾಗುವುದಿಲ್ಲ, ಇದು ಯಾವಾಗಲೂ ಸಹಾ ನಿರಂತರವಾಗಿ ಇರುವಂತ ಜ್ಞಾನವಾಗಿದೆ ಎಂದರು. ಪ್ರಪಂಚದಲ್ಲಿ 30,000 ಪುಸ್ತಕಗಳು ಮುದ್ರಣವಾಗುತ್ತವೆ, ಇದರಲ್ಲಿ ಕರ್ನಾಟಕದಲ್ಲಿ 8 ರಿಂದ 10 ಸಾವಿರ ಪುಸ್ತಕ ಗಳು ಬಿಡುಗಡೆಯಾಗುತ್ತವೆ. 3000 ಪುಸ್ತಕಗಳು ಪ್ರಕಟವಾಗುತ್ತವೆ ಆದರೆ ಇದರ ಬಗ್ಗೆ ಯಾರಿಗೂ ಸಹಾ ಅಸಕ್ತಿ ಇಲ್ಲವಾಗಿದೆ. ಎಸ್.ಎಸ್.ಎಲ್.ಸಿ.ವರೆಗೂ ಏನೂ ಬೇಕಾದರೂ ಓದಿ ತದ ನಂತರ ಪಠ್ಯಕ್ಕೆ ಅಗತ್ಯವಾದ ಪುಸ್ತಕಗಳನ್ನು ಓದಿ, ಇದರಲ್ಲಿ ಸಮಾಜ ಮುಖಿಯಾದ ಪುಸ್ತಕಗಳನ್ನು ಓದುವುದರ ಮೂಲಕ ನಿಮ್ಮ ಬದುಕನ್ನು ಉತ್ತಮಗೊಳಿಸಬಹುದಾಗಿದೆ. ನಮ್ಮಲ್ಲಿ ವ್ಯವಸ್ಥೆಯ ವಿರುದ್ಧ ಹಾಗೂ ಪರವಾದ ಸಾಹಿತ್ಯ ಇದೆ. ಸಮಾಜವನ್ನು ಸರಿಪಡಿಸುವ ಸಾಹಿತಿಗಳ ಸಂಖ್ಯೆ ಕಡಿಮೆ ಇದೆ. ನಮ್ಮ ಬದುಕನ್ನು ಅಕ್ಷರ ಸಂಸ್ಕೃತಿಯಿಂದ ಬದಲಾಯಿಸಲು ಸಾಧ್ಯವಿದೆ. ನಮ್ಮಲ್ಲಿ ದೇಶ ಭಕ್ತರಗಿಂತ ದೇಶ ದ್ರೋಹಿಗಳಿಗೆ ಹೆಚ್ಚಿನ ಮನ್ನಣೆಯನ್ನು ಕೂಡಲಾಗುತ್ತಿದೆ. ಅವರಿಗೆ ಗುಡಿಯನ್ನು ಕಟ್ಟುವುದರ ಮೂಲಕ ಪೂಜೆಯನ್ನು ಮಾಡಲಾಗುತ್ತಿರುವುದು ದುರಂತವಾಗಿದೆ ಎಂದರು. ನಮ್ಮಲ್ಲಿ ಜೀವನದ ಭರವಸೆಯನ್ನು ಕಳೆದುಕೊಂಡಾಗ ಪುಸ್ತಕಗಳನ್ನು ಓದುವುದರ ಮೂಲಕ ಆತ್ಮವಿಶ್ವಾಸವನ್ನು ಗಳಿಸಿಕೊಳ್ಳಬಹುದಾಗಿದೆ. ನಮ್ಮ ಜ್ಞಾನಾರ್ಜನೆಗೆ ಬೇರೆ ಸಲಕರಣೆಗಳಿಗಿಂತ ಪುಸ್ತಕ ಉತ್ತಮವಾದ ಹವ್ಯಾಸವಾಗಿದೆ. ಮನೆಯಲ್ಲಿ ಚಿಕ್ಕ ಮಕ್ಕಳಿಂದ ಆಸೆಗಳನ್ನು ತುಂಬುವುದರ ಮೂಲಕ ಜೀವನವನ್ನು ಪ್ರಾರಂಭ ಮಾಡಲಾಗುತ್ತಿದೆ, ಇದು ನಿಲ್ಲಬೇಕು, ಮಕ್ಕಳಿಗೆ ಪುಸ್ತಕವನ್ನು ಓದುವ ಹವ್ಯಾಸವನ್ನು ಬೆಳಸಬೇಕಿದೆ. ನಮ್ಮಲ್ಲಿ ಅಕ್ಷರ ಸಂಸ್ಕೃತಿಯ ಪ್ರಮಾಣ ಕಡಿಮೆ ಇದೆ ಸ್ವಾತಂತ್ರ್ಯ ಬಂದಾಗಿನಿಂದಲೂ ಸಾಕ್ಷರತೆಯ ಪ್ರಮಾಣ ಈಗ ಶೇ.70 ರಷ್ಟು ಮಾತ್ರ ಆಗಿದೆ. ನಮ್ಮನ್ನು ಸರಿದಾರಿಗೆ ತರುವಂತ ಸಾಹಿತ್ಯವನ್ನು ಅಧ್ಯಯನ ಮಾಡಬೇಕಿದೆ. ಇದರಿಂದ ನಮ್ಮಲ್ಲಿ ಭರವಸೆಗಳನ್ನು ಮೂಡಿಸುತ್ತದೆ. ಎಂದು ಯಾದವ್ ರೆಡ್ಡಿ ತಿಳಿಸಿದರು.

ಕೊನೆಗೂ ಅರ್ಥವಾಗದವಳು ಕಥಾ ಸಂಕಲನದ ಬಗ್ಗೆ ಮಾತನಾಡಿದ ಸಾಹಿತಿಗಳು ನಿವೃತ್ತ ಉಪನ್ಯಾಸಕರಾದ ಶ್ರೀಮತಿ ಶೈಲಾ ವಿಜಯಕುಮಾರ್ ಇಂದಿನ ದಿನಮಾನದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯಗಳು ಹೆಚ್ಚಾಗುತ್ತಿವೆ, ರಾಕ್ಷಸರನ್ನು ಮೀರಿದ ಒಂದು ವರ್ಗ ತಲೆ ಎತ್ತುತ್ತಿದೆ. ದೇಶದಲ್ಲಿ ಮೃಗಿಯ ಸಂಸ್ಕೃತಿಯನ್ನು ಹೊಂದಿದವರ ಪ್ರಮಾಣ ಹೆಚ್ಚಾಗುತ್ತಿದೆ. ಇಂದಿನ ದಿನದಲ್ಲಿ ಮಾನವರಾದ ನಾವುಗಳು ಅಧುನಿಕತೆಗೆ ಹೊಂದಿಕೊಳ್ಳುವ ಕಾರ್ಯವನ್ನು ಮಾಡಲಾಗುತ್ತಿದೆ. ಸೀರೆಗಳಿಂದ ಮಿನಿ ಸ್ಕರ್ಟ್‌ಗಳಿಗೆ ಹೋಗಲಾಗುತ್ತಿದೆ. ನಮ್ಮ ಸಂಸ್ಕೃತಿಯನ್ನು ಬಿಟ್ಟು ಪ್ರಾಶ್ಯಿಮಾತ್ಯರ ಸಂಸ್ಕೃತಿಯನ್ನು ಅನುಸರಿಸಲಾಗುತ್ತಿದೆ. ಇಷ್ಟರ ಮಟ್ಟಿಗೆ ನಮ್ಮ ಮೇಲೆ ಪ್ರಭಾವವನ್ನು ಅದು ಬೀರಿದೆ. ಪರಮಶ್ವರಪ್ಪ ಕುದರಿಯವರ ಕೊನೆಗೂ ಅರ್ಥವಾಗದವಳು ಕಥಾ ಸಂಕಲದಲ್ಲಿ 13 ಸಣ್ಣ ಕಥೆಗಳಿಂದ್ದ ಇದರಲ್ಲಿ 8 ಪ್ರೇಮ ಕಥೆಗಳಾದರೆ 5 ಆತ್ಮಹತ್ಯೆ ಕಥೆಗಳಾಗಿವೆ. ಇಂದಿನ ಜನತೆ ಸಣ್ಣ–ಪುಟ್ಟದಕ್ಕೆಲ್ಲಾ ಆತ್ಮಹತ್ಯೆಯ ದಾರಿಯನ್ನು ಹಿಡಿಯುತ್ತಿದ್ದಾರೆ ಸಮಸ್ಯೆಯನ್ನು ಬಗೆಹರಿಸಿಕೊಳ್ಳುವ ವ್ಯವದಾನ ಇಲ್ಲವಾಗಿದೆ ಎಂದು ವಿಷಾಧಿಸಿದರು.

ಮಹಿಳೆ ಇಂದಿನ ದಿನಮಾನದಲ್ಲಿ ಅರ್ಥ ಮಾಡಿಕೊಳ್ಳದ ವಸ್ತುವಾಗಿದ್ದಾಳೆ ಒಂದು ಸುಂದರವಾದ ಕುಂಟುಂಬ ಇರಬೇಕಾದರೆ ಹೆಂಡತಿಯನ್ನು ಪ್ರೀತಿಸಬೇಕು ಗಂಡನನ್ನು ಹೊಗಳಬೇಕು ಅಗ ಮಾತ್ರ ಸುಂದರವಾದ ಸಂಸಾರವಾಗಲು ಸಾಧ್ಯವಿದೆ.

## ಫಾಸ್ಟ್ ನ್ಯೂಸ್

### ಅ.2ರಂದು ಮಹಾತ್ಮಾ ಗಾಂಧೀಜಿ, ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ನಗರಸಭೆ ವತಿಯಿಂದ ಅಕ್ಟೋಬರ್ 2ರಂದು ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ಮಹಾತ್ಮಾ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀಜಿ ಜಯಂತಿ" ಕಾರ್ಯಕ್ರಮ ಆಯೋಜಿಸಲಾಗಿದೆ.ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕಕೆ.ಸಿ.ವೀರೇಂದ್ರಪಪ್ಪಿಅಧ್ಯಕ್ಷತೆವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್. ರಾಘವೇಂದ್ರ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹಾಗೂ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಗಣ್ಯರು ಭಾಗವಹಿಸುವರು. ಚಿತ್ರದುರ್ಗ ಜಿಲ್ಲಾ ಶರಣ ಸಾಹಿತ್ ಪರಿಷತ್ತು ಕಾರ್ಯದರ್ಶಿ ಹಾಗೂ ಸಾಹಿತಿ ಹುರುಳಿ ಎಂ ಬಸವರಾಜ್ ಅವರು ಉಪನ್ಯಾಸ ನೀಡುವರು. ಗಾಂಧಿ ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 9ಕ್ಕೆ ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ನೀಲಕಂಠೇಶ್ವರ ದೇವಸ್ಥಾನದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಸ್ವಚ್ಛತಾ ನಡಿಗೆ ನಡೆಯಲಿದೆ. ನಂತರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಶ್ರಮದಾನ ಮತ್ತು ಸ್ವಚ್ಛತಾ ಪ್ರತಿಜ್ಞಾವಿಧಿ ಸ್ವೀಕಾರ ನಡೆಯಲಿದೆ. ಸ್ವಚ್ಛತಾ ನಡಿಗೆ ಕಾರ್ಯಕ್ರಮಕ್ಕೆ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಚಿತ್ರದುರ್ಗ ತಾಲ್ಲೂಕುಮಟ್ಟದ ಅಧಿಕಾರಿಗಳು, ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಸೂಚನೆ ನೀಡಿದ್ದಾರೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

66/11 ಕೆ.ವಿ. ವಿದ್ಯುತ್ ಕೇಂದ್ರದಿಂದ ತುರ್ತು ಕಾಮಗಾರಿ ಹಮ್ಮಿಕೊಂಡಿರುವುದರಿಂದ ಆಕ್ಟೋಂಬರ್ 1 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಎಫ್–2 ಎಂ.ಸಿ.ಸಿ.ಬಿ ಫೀಡರ್, ಸಿದ್ದವೀರಪ್ಪ ಬಡಾವಣೆಯ 2,3,4,5,6,7 ನೇ ಕ್ರಾಸ್, ಶಾಮನೂರು ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ರೈಲುಗಳ ತಾತ್ಕಾಲಿಕ ನಿಲುಗಡೆ ಮುಂದುವರಿಕೆ

» **ದಾವಣಗೆರೆ**

ರಾಮಗಿರಿ, ಬೀರೂರು ಮತ್ತು ಆಲೂರು ನಿಲ್ದಾಣಗಳಲ್ಲಿ ಕೆಲವು ರೈಲುಗಳಿಗೆ ಇದ್ದ ಒಂದು ನಿಮಿಷದ ತಾತ್ಕಾಲಿಕ ನಿಲುಗಡೆಯನ್ನು ನೈಋತ್ಯ ರೈಲ್ವೆ ಮುಂದುವರಿಸಲು ನಿರ್ಧರಿಸಿದೆ ಎಂದು ಹುಬ್ಬಳ್ಳಿಯ ನೈರುತ್ಯ ರೈಲ್ವೆಯ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ.ಮಂಜುನಾಥ್ ಕನಮಡಿ ತಿಳಿಸಿದ್ದಾರೆ. ರೈಲು ಸಂಖ್ಯೆ: 17325/17326 ಬೆಳಗಾವಿ–ಮೈಸೂರು–ಬೆಳಗಾವಿ ವಿಶ್ವಮಾನವ ಡೈಲಿ ಎಕ್ಸ್‌ಪ್ರೆಸ್, ರೈಲು ಸಂಖ್ಯೆ: 17391/17392 ಕೆಎಸ್‌ಆರ್ ಬೆಂಗಳೂರು–ಎಸ್‌ಎಸ್‌ಎಸ್ ಹುಬ್ಬಳ್ಳಿ, ಕೆಎಸ್‌ಆರ್ ಬೆಂಗಳೂರು ಡೈಲಿ ಎಕ್ಸ್‌ಪ್ರೆಸ್ ರೈಲುಗಳಿಗೆ ರಾಮಗಿರಿ ನಿಲ್ದಾಣದಲ್ಲಿ ಇರುವ ಒಂದು ನಿಮಿಷದ ತಾತ್ಕಾಲಿಕ ನಿಲುಗಡೆಯನ್ನು ಅಕ್ಟೋಬರ್ 1 ರಿಂದ ಡಿಸೆಂಬರ್ 31 ರವರೆಗೆ ಮೂರು ತಿಂಗಳ ಕಾಲ ಮುಂದುವರೆಸಲಾಗಿದೆ. ರೈಲು ಸಂಖ್ಯೆ: 16587/16588 ಯಶವಂತಪುರ–ಬಿಕಾನೇರ್–ಯಶವಂತಪುರ– ಬೀ ವೀಕ್ಲಿ ಎಕ್ಸ್‌ಪ್ರೆಸ್ ರೈಲುಗಳಿಗೆ ಬೀರೂರು ನಿಲ್ದಾಣದಲ್ಲಿ ಇರುವ ಒಂದು ನಿಮಿಷದ ತಾತ್ಕಾಲಿಕ ನಿಲುಗಡೆ ಅಕ್ಟೋಬರ್ 1 ರಿಂದ ಡಿಸೆಂಬರ್ 31 ರವರೆಗೆ ಮೂರು ತಿಂಗಳು ನಿಲುಗಡೆ ಮುಂದುವರಿಯಲಿದೆ. ರೈಲು ಸಂಖ್ಯೆ 16515/16516 ಯಶವಂತಪುರ–ಕಾರವಾರ–ಯಶವಂತಪುರ ಟ್ರೈ–ವೀಕ್ಲಿ ಎಕ್ಸ್‌ಪ್ರೆಸ್, ರೈಲು ಸಂಖ್ಯೆ 16575/16576 ಯಶವಂತಪುರ–ಮಂಗಳೂರು ಜಂಕ್ಷನ್–ಯಶವಂತಪುರ ಗೋಮಟೇಶ್ವರ ಟ್ರೈ–ವೀಕ್ಲಿ ಎಕ್ಸ್‌ಪ್ರೆಸ್ ರೈಲು ಸಂಖ್ಯೆ 16539/16540 ಯಶವಂತಪುರ–ಮಂಗಳೂರು–ಜಂಕ್ಷನ್–ಯಶವಂತಪುರ ಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲುಗಳಿಗೆ ಆಲೂರು ನಿಲ್ದಾಣದಲ್ಲಿದ್ದ ಒಂದು ನಿಮಿಷದ ತಾತ್ಕಾಲಿಕ ನಿಲುಗಡೆಯನ್ನು ನವೆಂಬರ್ 30 ರವರೆಗೆ ಮುಂದುವರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.



# ಗಾಂಧಿ

**ಗಾಂಧಿ ಎದೆಯಿಂದ ಘೋಡ್ಸೆ ಚಿಮ್ಮಿಸಿದ ರಕ್ತ ಇನ್ನೂ ಹರಿಯುತ್ತಲೇ ಇದೆ,**

**ಗಾಂಧಿ ಉಸಿರಾಡುತ್ತಲೇ ಇದ್ದಾರೆ,**

**ಘೋಡ್ಸೆಯೂ ಸಹ......**

## ಗಾಂಧಿಯ ರಾಮ,
## ಘೋಡ್ಸೆಯ ರಾಮ,
## ಗಾಂಧಿಯ ಧರ್ಮ,

**ಘೋಡ್ಸೆಯ ಧರ್ಮ ಸಂಘರ್ಷ ಇನ್ನೂ ನಡೆಯುತ್ತಲೇ ಇದೆ.......**

- **ಗಾಂಧಿ ಬೆಂಬಲಿಗರು ಭ್ರಷ್ಟರಾದರು,**
- **ಗಾಂಧಿ ವಿರೋಧಿಗಳು ದುಷ್ಟರಾದರು,**
- **ಭ್ರಷ್ಟ - ದುಷ್ಟರ ಅಧಿಕಾರ ಇನ್ನೂ ಮುಂದುವರಿಯುತ್ತಲೇ ಇದೆ,**
- **ಅಹಿಂಸಾ ಪರಮೋಧರ್ಮ ಎಂದು ನುಡಿಯುತ್ತಲೇ ಇದ್ದಾರೆ.......**

ಸತ್ಯ ನುಡಿದವ ಕೊಲೆಯಾದ,
ಅಸತ್ಯ ನುಡಿಯುವವ ನಾಯಕನಾದ,
ಭತ್ತ ಬೆಳೆಯುವ ರೈತ ಆತ್ಮಹತ್ಯೆ ಮಾಡಿಕೊಂಡ,
ಅಕ್ಕಿ ಮಾರುವ ವ್ಯಾಪಾರಿ ಕೊಟ್ಯಾಧೀಶನಾದ,
ಗಾಂಧಿಯ " ಸತ್ಯಮೇವ ಜಯತೇ " ಇನ್ನೂ ಶೀರ್ಷಿಕೆಯಾಗಿಯೇ ಇದೆ.....

ಶಸ್ತ್ರಗಳೂ ಇವೆ,
ಶಾಸ್ತ್ರಗಳೂ ಇವೆ,
ಕಾನೂನು ಇದೆ,
ಶಿಕ್ಷೆಯೂ ಇದೆ,
ದೈವವೂ ಇದೆ,
ಭ್ರಷ್ಟಾಚಾರವೂ ಇನ್ನೂ ನಿರಂತರವಾಗಿದೆ,
ಗಾಂಧಿ ಫೋಟೋ ಗೋಡೆಯ ಮೇಲೆ ಇನ್ನೂ ಉಳಿದಿದೆ........

ಖುರಾನ್ ಪಠಣವಾಗುತ್ತಲೇ ಇದೆ,
ಬೈಬಲ್ ಪ್ರಾರ್ಥನೆಯಾಗುತ್ತಲೇ ಇದೆ,
ಭಗವದ್ಗೀತೆ ಶ್ಲೋಕಿಸುತ್ತಲೇ ಇದೆ,
ಅನೈತಿಕತೆ ಮೆರೆಯುತ್ತಲೇ ಇದೆ,
ಮದ್ಯಪಾನ ಸುರಿಯುತ್ತಲೇ ಇದೆ,
ಗಾಂಧಿಯ ಹುಟ್ಟು ಹಬ್ಬಗಳು ಇನ್ನೂ ನಡೆಯುತ್ತಲೇ ಇದೆ.....

ಮರ್ಯಾದ ಹತ್ಯೆಗಳು ನಡೆಯುತ್ತಿವೆ,
ಅಸ್ಪೃಶ್ಯತಾ ಆಚರಣೆಯೂ ಇದೆ,
ಜಾತಿ ಲೆಕ್ಕಾಚಾರಗಳು ನಿರಂತರವಾಗಿದೆ,
ಸಬ್ ಕೋ ಸನ್ಮತಿ ದೇ ಭಗವಾನ್ ಧ್ವನಿ ಕೇಳಿ ಬರುತ್ತಲೇ ಇದೆ........
ಗಾಂಧಿಯ ಹುಡುಕಾಟದಲ್ಲಿ.........

ಕರ್ನಾಟಕದ ಬೆಳಗಾವಿ ಜಿಲ್ಲೆಯ ಒಂದು ಹಳ್ಳಿಯ ನಿರಾಶ್ರಿತ ಶಿಬಿರದ ಮುಂದೆ ಸರ್ಕಾರದ ಪರಿಹಾರಕ್ಕಾಗಿ ಕಾದು ಕುಳಿತು ಎಲ್ಲವನ್ನೂ ಕಳೆದುಕೊಂಡ ರೈತನೊಬ್ಬ ದಾರಿಯತ್ತ ದೃಷ್ಟಿ ನೆಟ್ಟು ಸರ್ಕಾರದ ಜೀಪು ಬರುವುದನ್ನೇ ತದೇಕಚಿತ್ತದಿಂದ ನೋಡುತ್ತಿರುವ ಕಣ್ಣುಗಳಲ್ಲಿ ಗಾಂಧಿ ಕಾಣಿಸುತ್ತಾರೆ.......

ಮ್ಯಾನ್ ಹೋಲ್ ಸ್ವಚ್ಛಗೊಳಿಸಲು ದಲಿತನೊಬ್ಬನನ್ನು ಇಳಿಸಿ ಸಹಜವಾಗಿ ಅದರಿಂದ ಆತ ಉಸಿರುಗಟ್ಟಿ ಸತ್ತ ನಂತರ ಆತನ ಹೆಂಡತಿ ಮಕ್ಕಳು ಆ ಶವದ ಮೇಲೆ ಬಿದ್ದು ಅಳುತ್ತಿರುವಾಗ ಅವರ ಕಣ್ಣೀರಿನಲ್ಲಿ ಗಾಂಧಿಯನ್ನು ನೋಡಬಹುದು.......

ಭಾರತದ ಬಹುತೇಕ ಎಲ್ಲಾ ಫ್ಲೈ ಓವರ್ ರಸ್ತೆಗಳ ಕೆಳಗೆ ಮನುಷ್ಯ ಪ್ರಾಣಿಯ ಲಕ್ಷಣಗಳನ್ನೇ ಹೊಂದಿದ್ದರು ಕೆಲವು ಅನಾಥರು ಗಾಳಿಚಳಿಮಳೆಗೂ ಜಗ್ಗದೆ ಅಲ್ಲಿಯೇ ವಾಸ ಮಾಡುತ್ತಿರುವವರ ಮನಸ್ಸುಗಳಲ್ಲಿ ಗಾಂಧಿಯನ್ನು ನೋಡಬಹುದು......

ಬಸ್ ರೈಲು ನಿಲ್ದಾಣಗಳಲ್ಲಿ ಬಣ್ಣ ಬಣ್ಣದ ಉಡುಗೆಗಳಲ್ಲಿ ರಂಗುರಂಗಿನ ಮೇಕಪ್ಪುಗಳಲ್ಲಿ ಗಿರಾಕಿಗಳಿಗಾಗಿ ಕಾದು ಕುಳಿತಿರುವ ನಿತ್ಯ ಸುಮಂಗಲಿಯರ ಕನಸುಗಳಲ್ಲಿ ಗಾಂಧಿ ಅಡಗಿದ್ದಾರೆ. ಸ್ವಲ್ಪ ಕಷ್ಟ ಪಟ್ಟರೆ ಕಾಣಬಹುದು.....

ಬೃಹತ್ ನಗರಗಳ ಸರ್ಕಾರಿ ಆಸ್ಪತ್ರೆಗಳ ಪ್ರತಿ ಹಾಸಿಗೆಯ ಮೇಲೆ ಬಡತನ ಮತ್ತು ಅಲ್ಲಿನ ವ್ಯವಸ್ಥೆಯಿಂದಾಗಿಯೇ ತನ್ನ ಆಯಸ್ಸು ಕಡಿಮೆ ಆಗಿರುವುದನ್ನು ಯೋಚಿಸುತ್ತಲೇ ಕೆಮ್ಮುತ್ತಿರುವ ರೋಗಿಗಳ ಉಗುಳಿನಲ್ಲಿ ಗಾಂಧಿ ಅಡಗಿದ್ದಾರೆ.....

ಕಾಲೇಜಿನ ಹಿಂಭಾಗದ ಟೀ ಅಂಗಡಿಯಲ್ಲಿ ತಿನ್ನುವ ಬನ್ನಿನೊಳಗೆ ಗಾಂಜಾ ಚರಸ್ ಕೊಕೇನ್ ಇಟ್ಟು ಯುವಕರಿಗೆ ಮಾರಾಟ ಮಾಡಿ ಬದುಕು ಕಟ್ಟುವ ಮತ್ತು ಅದನ್ನು ಸೇವಿಸಿ ಬೈಕ್ ವೀಲಿಂಗ್ ಮಾಡುತ್ತಾ ರಾತ್ರಿಗಳಲ್ಲಿ ಮಜಾ ಉಡಾಯಿಸುವ ಹಾಗು ಅದನ್ನು ನಿಯಂತ್ರಿಸಲಾಗದ ಬೃಹತ್ ಪೋಲೀಸ್ ವ್ಯವಸ್ಥೆಯ ಅಸಹಾಯಕತೆಯ ನಿಟ್ಟುಸಿರಿನಲ್ಲಿ ಗಾಂಧಿ ಸ್ಪಷ್ಟವಾಗಿ ಕಾಣುತ್ತಾರೆ.....

ಅಂಬೇಡ್ಕರ್ ಎಂಬ ಅಸ್ಪೃಶ್ಯ ಹುಡುಗ ಅದು ಯಾವ ಮಾಯೆಯಲ್ಲೋ ತನ್ನ ಅತ್ಯದ್ಭುತ ಪ್ರತಿಭೆಯಿಂದ ಈ ಆಧ್ಯಾತ್ಮದ ತವರೂರು ಭಾರತದ ಸಂವಿಧಾನ ಕರಡು ರಚನಾ ಸಮಿತಿಯ ಅಧ್ಯಕ್ಷರಾಗಿ ಅಂಗೀಕರಿಸಲ್ಪಟ್ಟ ಕಾನೂನುಗಳು ಅವರ ಆಶಯಕ್ಕೆ ವಿರುದ್ದವಾಗಿ ಬಹುತೇಕ ಶ್ರೀಮಂತರ ರಕ್ಷಕವಾಗಿ ಬಡವರು ಮಾತ್ರ ಅದಕ್ಕೆ ಬಲಿಯಾಗಿದ್ದು ಆ ಬಡವರ ಚರ್ಮದ ಬೆವರಿನಲ್ಲಿ ಗಾಂಧಿ ಕಾಣುತ್ತಾರೆ.....

ಆದ್ದರಿಂದ ಈ ಸಂದರ್ಭದಲ್ಲಿ ಈ ಹಂತದಲ್ಲಿಯೇ ಗಾಂಧಿಯ ಹುಡುಕಾಟ ಅರ್ಥ ಕಳೆದುಕೊಳ್ಳುತ್ತದೆ..........

ಭಾರತದ ಬಹಳಷ್ಟು ಜನರು ಸ್ವಾಭಾವಿಕ ಮತ್ತು ಕೃತಕ ಬಣ್ಣಗಳ ನಡುವಿನ ವ್ಯತ್ಯಾಸಗಳನ್ನೇ ಮರೆತಿದ್ದಾರೆ........

" ಸತ್ಯದೊಂದಿಗೆ ನನ್ನ ಬದುಕಿನ ಪ್ರಯೋಗ " ಎಂಬ ಭಾವನೆಯೊಂದಿಗೆ ಬದುಕಿದ,ಆಹಾರವೇ ಇರಲಿ, ಉಡುಗೆಯೇ ಇರಲಿ, ಪ್ರಯಾಣವೇ ಇರಲಿ, ಭದ್ರತೆಯೇ ಇರಲಿ, ಮನೋ ದೈಹಿಕ ನಿಗ್ರಹಗಳೇ ಇರಲಿ ಎಲ್ಲದರಲ್ಲೂ ಪಾರದರ್ಶಕ ಸರಳತೆ ಮೆರೆದ, ಅಧಿಕಾವನ್ನು ತಿರಸ್ಕರಿಸಿದ ಗಾಂಧಿಯವರನ್ನು ಈಗ ಹುಡುಕುವುದು ಅರ್ಥಹೀನ......

ಇರಲಿ, ಇಷ್ಟೆಲ್ಲದರ ನಡುವೆಯೂ ಗಾಂಧಿಯನ್ನು ಒಪ್ಪಲೇ ಬೇಕೆಂಬ ಒತ್ತಾಯ ಸರಿಯಲ್ಲ. ಪ್ರತಿಯೊಬ್ಬರಿಗೂ ಅವರವರ ಆಯ್ಕೆಯ ಸ್ವಾತಂತ್ರ್ಯ ಇದೆ. ಆದರೆ ವಿಷಯದ ಆಳವನ್ನು ಬದುಕಿನ ಅನುಭವ ಮತ್ತು ವ್ಯವಸ್ಥೆಯ ಹಿನ್ನೆಲೆಯಲ್ಲಿ ಸರಿಯಾಗಿ ಗ್ರಹಿಸದಿದ್ದರೆ ಜೀವನಮೌಲ್ಯ ಕುಸಿಯುತ್ತದೆ. ಬದುಕನ್ನು ಹೇಗೋ ಕಳೆಯಬಹುದು. ಆದರೆ ಸತ್ವಯುತ ಬದುಕು ನಮ್ಮದಾಗಲು ನಾವು ಆಯ್ಕೆ ಮಾಡಿಕೊಳ್ಳುವ ದಾರಿ ತುಂಬಾ ಮುಖ್ಯ. ಉಳಿದದ್ದು ನಿಮಗೆ ಸೇರಿದ್ದು.......

ಗಾಂಧಿಯ ಬಗ್ಗೆ ಬರೆಯಲು
ಭಯವಾಗುತ್ತದೆ,
ಸಂಕೋಚವಾಗುತ್ತದೆ, ಗೊಂದಲವಾಗುತ್ತದೆ, ಅನುಮಾನವಾಗುತ್ತದೆ,
ನೋವು ಬೇಸರ ದುಃಖದಿಂದ ಆತ್ಮಸಾಕ್ಷಿ ಹಿಂಡುತ್ತದೆ......

ಏಕೆಂದರೆ ಗಾಂಧಿ ಮನುಷ್ಯರೆಲ್ಲರ ಭಾವನೆಗಳ ಕನ್ನಡಿ. ಆತ್ಮವಂಚಕರು ಗಾಂಧಿ ಎಂಬ ಕನ್ನಡಿಯಲ್ಲಿ ನೋಡಿದಾಗ ಅವರ ಆತ್ಮಗಳು ಕಪ್ಪಾಗಿ ವಿಕೃತವಾಗಿ ಕಾಣುತ್ತವೆ. ಹಾಗಾಗಿ ಅವರೆಲ್ಲ ಗಾಂಧಿಯನ್ನು ದ್ವೇಷಿಸುತ್ತಾರೆ. ......

ಶಾಂತಿ ಅಹಿಂಸೆ ಹೇಡಿಗಳ ಅಸ್ತ್ರಗಳು ಎನ್ನಲಾಗುತ್ತದೆ. ಇದು ಅಪ್ರಬುದ್ಧ ಅವಿವೇಕಿ ಅತ್ಯುತ್ಸಾಹಿಗಳ ಹೇಳಿಕೆ ಅಷ್ಟೆ. ಭಾರತ ಸ್ವಾತಂತ್ರ್ಯದ ನಿಜವಾದ ಸಂಘಟಿತ ಶಕ್ತಿ ಗಾಂಧಿ ಮಾತ್ರವೆ........

ಕೋಟ್ಯಾಂತರ ಜನರ ತ್ಯಾಗ ಬಲಿದಾನಗಳಿದ್ದರೂ ಗಾಂಧಿ ನಾಯಕತ್ವ ಇಲ್ಲದಿದ್ದರೆ ಹರಿಯುತ್ತಿದ್ದ ರಕ್ತ, ತಬ್ಬಲಿ ಮಕ್ಕಳ ಆಕ್ರಂದನ, ವಿಧವೆಯರ ಗೋಳು ಊಹಿಸಲಸಾಧ್ಯವಾಗಿರುತ್ತಿತ್ತು. ಸಾಮಾನ್ಯ ಜನರ ಅರಿವಿಗೆ ಇದು ನಿಲುಕುವುದಿಲ್ಲ..........

ಗಾಂಧಿ ನೆನಪಾದಾಗಲೆಲ್ಲ ನನಗೆ,
ನಾನೆಷ್ಟು ಕಪಟಿ, ನಾನೆಷ್ಟು ಅಸಮರ್ಥ, ನಾನೆಷ್ಟು ದುರ್ಬಲ, ನಾನೆಷ್ಟು ಅಜ್ಞಾನಿ, ನಾನೆಷ್ಟು ಆತ್ಮವಂಚಕ ಎಂದು ಮನಸ್ಸು ಹೇಳುತ್ತಿರುತ್ತದೆ........


ಏನೇ ಆಗಲಿ, ಯಾರು ಏನೇ ಹೇಳಲಿ, ಜನಪ್ರಿಯತೆಯ ಅಮಲಿನಲ್ಲಿ ಯಾರನ್ನು ಬೇಕಾದರೂ ವಿಜೃಂಭಿಸಲಿ ಒಳ್ಳೆಯ ಪ್ರಬುದ್ಧ ಮನಸ್ಸುಗಳು ಈಗಲೂ ಗಾಂಧಿಯನ್ನು ಮರೆಯದಿರೋಣ....

ಯಾರೇ ಬೇಸರಿಸಿಕೊಂಡರೂ,.....

ಕಾಣಸಿಗುವ ಎಲ್ಲಾ ದೃಷ್ಟಿಕೋನಗಳಿಂದ ನೋಡಿದರೆ ಮಾತ್ರ ಗಾಂಧಿ ಎಲ್ಲರಿಗೂ ಏಕ ರೀತಿಯಲ್ಲಿಯೇ ಕಾಣುವರು. ಅದಕ್ಕೆ ಅವರೊಂದು ಸಾಕ್ಷಿ ಪ್ರಜ್ಞೆ.

ಹೇಳಲಾಗದ ಒಳ ಅರ್ಥದ ಇನ್ನೂ ಅನೇಕ ಭಾವನೆಗಳು ಹಾಗೆ ಬಚ್ಚಿಟ್ಟುಕೊಂಡಿವೆ.....

ಅಕ್ಟೋಬರ್ 2 ರ ಗಾಂಧಿ ಜನ್ಮದಿನದ ಸವಿ ನೆನಪಿನಲ್ಲಿ.........
ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

## ಪೌಷ್ಠಿಕ ಆಹಾರ ವಿತರಣಾ ಕಾರ್ಯಕ್ರಮಕ್ಕೆ ಶಾಸಕ ಚಂದ್ರಪ್ಪ ಚಾಲನೆ

» **ಹೊಳಲ್ಕೆರೆ**

ಮಕ್ಕಳಿಗೆ ಗುಣ ಮಟ್ಟದ ಶಿಕ್ಷಣ ನೀಡಿ ಮುಂದಿನ ಭವಿಷ್ಯ ರೂಪಿಸುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ ಎಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಅಕ್ಷರ ದಾಸೋಹ, ಅಜೀಂ ಪ್ರೇಂಜಿ ಫೌಂಡೇಷನ್ ವತಿಯಿಂದ ಪಟ್ಟಣದ ಸಂವಿಧಾನ ಸೌಧದಲ್ಲಿ ತಾಲ್ಲೂಕಿನ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲಾ ಮಕ್ಕಳಿಗೆ ವಾರದಲ್ಲಿ ಆರು



ದಿನಗಳ ಕಾಲ ನೀಡುವ ಪೌಷ್ಠಿಕಾಂಶ ಆಹಾರ ವಿತರಣೆಗೆ ಚಾಲನೆ ನೀಡಿ ಮಾತನಾಡಿದರು.

ಮಕ್ಕಳಿಗೆ ಆರು ದಿನಗಳ ಕಾಲ ಮೊಟ್ಟೆ ಮತ್ತು ಬಾಳೆಹಣ್ಣು ನೀಡುವ ರಾಜ್ಯ ಸರ್ಕಾರದ ಯೋಜನೆ ಅತ್ಯುತ್ತಮವಾದುದು. ಈಗಾಗಲೆ ಸರ್ಕಾರ ಮಕ್ಕಳಿಗೆ ಪಠ್ಯ ಪುಸ್ತಕ. ಶೂ, ಸಾಕ್ಸ್ ನೀಡುತ್ತಿದೆ. ಸರ್ಕಾರದಿಂದ ಸಿಗುವ ಎಲ್ಲಾ ರೀತಿಯ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ತಂದೆ–ತಾಯಿ, ಗುರು–ಹಿರಿಯರು ಹಾಗೂ ನೀವುಗಳು ಓದಿದ ಶಾಲೆಗೆ ಗೌರವ ತರುವ ರೀತಿಯಲ್ಲಿನಡೆದುಕೊಳ್ಳಬೇಕು.ಪಟ್ಟಣದಲ್ಲಿ ಗುಣಮಟ್ಟದ ಶಾಲಾ–ಕಾಲೇಜು, ಸ್ಟೇಡಿಯಂ, ಒಳಾಂಗಣ ಕ್ರೀಡಾಂಗಣ, ಈಜುಕೊಳ ನಿರ್ಮಿಸಲಾಗಿದೆ. ಸರ್ಕಾರದ ಎಲ್ಲಾ ಯೋಜನೆಗಳು ನಿಮಗೆ ತಲುಪಲಿ. ಮಕ್ಕಳ ಮನಸ್ಸಿಗೆ ನಾಟುವ ರೀತಿಯಲ್ಲಿ ಪಾಠ ಹೇಳಿಕೊಡುವಂತೆ ಶಾಸಕ ಡಾ.ಎಂ. ಚಂದ್ರಪ್ಪ ಶಿಕ್ಷಕರುಗಳಿಗೆ ಸೂಚಿಸಿದರು.

ಪುರುಸಭೆ ಸದಸ್ಯರುಗಳಾದ ಆರ್.ಎ.ಅಶೋಕ್, ಸುಧಾ ಬಸವರಾಜ್, ತಾಲ್ಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಿಶ್ವನಾಥ್, ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಶ್ರೀನಿವಾಸ್, ವಿವಿಧ ಇಲಾಖೆ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T